ಸಂಪುಟ : 10 ಸಂಚಿಕೆ: 43 ಪುಟ : 4+2 ಬೆಲೆ: 3.00 ಶನಿವಾರ ಮಾರ್ಚ್ 15 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 43 Pages : 4+2 Price : 3.00 Saturday March 15 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಘಟಕದ ಹಿರಿಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಘಟಕದ ಅಧ್ಯಕ್ಷ ಡಾ. ರವಿ ಗುಂಜೀಕರ್

# ಸರಕಾರಿ ನೌಕರರ ಆಶಾಕಿರಣ ಸಿ.ಎಸ್. ಷಡಕ್ಷರಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಸರಕಾರಿ ನೌಕರರು ಸರಕಾರದಿಂದ ಹಲವಾರು ಸೌಲಭ್ಯಗಳನ್ನು ಪಡೆದಿದ್ದಾರೆ ಎಂದರೆ, ಅದಕ್ಕೆ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರೇ ಕಾರಣ. ಷಡಕ್ಷರಿ ಅವರು ರಾಜ್ಯ ಸರಕಾರಿ ನೌಕರರ ಆಶಾಕಿರಣವಾಗಿದ್ದಾರೆ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಘಟಕದ ಹಿರಿಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಘಟಕದ ಅಧ್ಯಕ್ಷ ಡಾ. ರವಿ ಗುಂಜೀಕರ್ ಹೇಳಿದರು.

ವಿಜಯಸಾಕ್ಷಿ ಜೊತೆ ತಮ್ಮ ಭವಿಷ್ಯದ ಯೋಜನೆಗಳು, ಹಿಂದಿನ ಅವಧಿಯ ಸಾಧನೆಗಳು, ಹೋರಾಟ ಮತ್ತು ಸಂಘಟನೆ ಬಗ್ಗೆ ಮಾತನಾಡಿದ ಅವರು, ಸಿ.ಎಸ್. ಷಡಕ್ಷರಿ ಅವರ ನೇತೃತ್ವದಲ್ಲಿ ನಡೆದ ಅನೇಕ ಹೋರಾಟಗಳು ಯಶಸ್ವಿಯಾಗಿವೆ. ಸರಕಾರದಿಂದ ಹತ್ತು ಹಲವಾರು ಬೇಡಿಕೆಗಳು ಈಡೇರಿವೆ. ಅದರಲ್ಲಿ ಪ್ರಮುಖವಾಗಿ ಹಳೆ ಪಿಂಚಣಿ ಯೋಜನೆ ಮರು ಜಾರಿಗೆ ಷಡಕ್ಷರಿ ಅವರ ಸಂಘಟಿತ ಪ್ರಯತ್ನವೇ ಕಾರಣವಾಗಿದೆ. ಅವರ ನೇತೃತ್ವದಲ್ಲಿ ಪ್ರಸ್ತುತ ಅವಧಿಯಲ್ಲೂ ಸರಕಾರಿ ನೌಕರರ ಹಲವಾರು ಬೇಡಿಕೆಗಳು ಈಡೇರುವ ವಿಶ್ವಾಸ ಮೂಡಿಸಿದೆ ಎಂದು ಡಾ. ರವಿ ಗುಂಜೀಕರ್ ಅಭಿಪ್ರಾಯಪಟ್ಟರು.

## ಅತಿಥಿ ಗೃಹ ಕನಸು

ರಾಜ್ಯದ ಬೇರೆ ಜಿಲ್ಲೆಗಳಿಂದ ಬರುವ ಸರಕಾರಿ ನೌಕರರಿಗೆ ಅನುಕೂಲ ಆಗುವ ನಿಟ್ಟಿನಲ್ಲಿ ಅತಿಥಿ ಗೃಹ ನಿರ್ಮಾಣ ಆಗಬೇಕು ಎನ್ನುವ ಕನಸಿದೆ. ಆದರೆ ನನ್ನ ಅವಧಿ ಕಡಿಮೆ ಇರುವ ಕಾರಣಕ್ಕೆ, ಮುಂದಿನ ಅಧ್ಯಕ್ಷರು ಆ ಕೆಲಸವನ್ನು ಕೈಗೆತ್ತಿಕೊಳ್ಳಲಿ. ನೌಕರರ ಭವನದ ಬದಲಾಗಿ ಬೇರೆ ಕಡೆ ಜಾಗ ನೋಡಿ, ಸರಕಾರಿ ನೌಕರರು ಉಳಿದುಕೊಳ್ಳಲು ಉಪಯೋಗ ಆಗುವಂಥ ಅತಿಥಿ ನಿರ್ಮಾಣ ಮಾಡಿದರೆ ಎಲ್ಲ ನೌಕರರಿಗೆ ಅನುಕೂಲ ಆಗಲಿದೆ ಎನ್ನುತ್ತಾರೆ ಡಾ. ರವಿ ಗುಂಜೀಕರ್.





## ಪಾರದರ್ಶಕ ಆಡಳಿತ

ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕಕ್ಕೆ ಸರಕಾರಿ ನೌಕರರ ಭವನದಿಂದ ಬಾಡಿಗೆ ಬರುತ್ತದೆ. ಉಳಿದಂತೆ ಸಂಘದ ಸದಸ್ಯತ್ವದ ಶೇ. 50ರಷ್ಟು ಶುಲ್ಕ ಜಿಲ್ಲಾ ಸಂಘಕ್ಕೆ ಬರುತ್ತದೆ. ಸಂಘ ಹಣಕಾಸಿನ ವಿಷಯದಲ್ಲಿ ಪಾರದರ್ಶಕವಾಗಿದೆ. ನಾನು ಅಧ್ಯಕ್ಷನಾಗಿ ಅಧಿಕಾರ ಸ್ವೀಕರಿಸಿದ ಮೊದಲ ದಿನದಿಂದ, ನೌಕರರ ಭವನದ ಬಾಡಿಗೆ ಹಣ ನೇರವಾಗಿ ಚಲನ್ ಮೂಲಕ ಬ್ಯಾಂಕ್ ಖಾತೆಗೆ ಜಮೆ ಆಗುತ್ತದೆ. ಅಧ್ಯಕ್ಷ- ಖಜಾಂಚಿ ಜಂಟಿ ಖಾತೆಯಿದ್ದು, ಹಣ ಪಾವತಿಸುವ ಸಂದರ್ಭ ಬಂದರೆ ಚೆಕ್ ಮೂಲಕ ನೀಡುತ್ತೇವೆ. ಪ್ರತಿ ವರ್ಷ ಲೆಕ್ಕಪರಿಶೋಧಕರ ಮೂಲಕ ಆಡಿಟ್ ಮಾಡಿಸಿ, ಸಂಘದ ಸಾಮಾನ್ಯ ಸಭೆಯಲ್ಲಿ ಮಂಡನೆ ಮಾಡಿ ಒಪ್ಪಿಗೆ ಪಡೆಯುತ್ತೇವೆ. ಹಣಕಾಸಿನ ಅವ್ಯವಹಾರಕ್ಕೆ ಅವಕಾಶ ನೀಡದಂತೆ ನೋಡಿಕೊಳ್ಳಲಾಗಿದೆ ಎನ್ನುತ್ತಾರೆ ಗುಂಜೀಕರ್.

## ಹಿರಿಯರ ಮಾರ್ಗದರ್ಶನ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರ ನೇತೃತ್ವದಲ್ಲಿ ಹಾಗೂ ಜಿಲ್ಲಾ ಘಟಕದ ಅಧ್ಯಕ್ಷ ಡಾ. ರವಿ ಗುಂಜೀಕರ್ ಮಾರ್ಗದರ್ಶನದಲ್ಲಿ ಸಂಘದ ಕಾರ್ಯಚಟುವಟಿಕೆಗಳು ಸುಗಮವಾಗಿ ನಡೆಯಲು ಕಾರಣವಾಗಿದೆ. ಭವಿಷ್ಯದಲ್ಲಿಯೂ ಸಿ.ಎಸ್ . ಷಡಕ್ಷರಿ ಮಾರ್ಗದರ್ಶನದಲ್ಲಿ ಸಂಘದ ಚಟುವಟಿಕೆಗಳು ನಿರಂತರವಾಗಿ ನಡೆಯಲಿದೆ.

**– ಡಾ. ಬಸವರಾಜ ಬಳ್ಳಾರಿ,**
ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ.

### ಸ್ವಂತ ಸೂರು ಕನಸು

ನೌಕರರು ತಮ್ಮ ಸ್ವಂತ ಮನೆ ಕಟ್ಟಿಕೊಂಡು ನೆಮ್ಮದಿಯ ಜೀವನ ನಡೆಸುವಂತಾಗಬೇಕು ಎನ್ನುವ ಕಾರಣಕ್ಕಾಗಿ ಸರಕಾರಿ ನೌಕರರ ಹೌಸಿಂಗ್ ಸೊಸೈಟಿ ಹಾಗೂ ಪತ್ತಿನ ಸಹಕಾರಿ ಸಂಘ ಸ್ಥಾಪನೆ ಮಾಡಲಾಗುತ್ತಿದೆ. ಸರಕಾರಿ ನೌಕರರಿಗಾಗಿ ಮಾಡುತ್ತಿರುವ ಹೌಸಿಂಗ್ ಸೊಸೈಟಿ ಯಾವುದೇ ಲಾಭದ ಉದ್ದೇಶವನ್ನು ಹೊಂದಿಲ್ಲ. ಒಬ್ಬ ಸರಕಾರಿ ನೌಕರರ ತನ್ನ ಸೇವಾವಧಿಯಲ್ಲಿ ಮಕ್ಕಳ ಶಿಕ್ಷಣ, ಜೀವನ ನಿರ್ವಹಣೆ ಮಾಡಲು ಕಷ್ಟಪಡಬೇಕಾದ ಸಂದರ್ಭಗಳಿವೆ.

▸▸ 4ನೇ ಪುಟಕ್ಕೆ

## ಬ್ಯಾಂಕ್ ಸ್ಥಾಪನೆ ಗುರಿ

ಸರಕಾರಿ ನೌಕರರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸಿಗಬೇಕು. ನಿವೃತ್ತಿಯಿಂದ ಬಂದ ಹಣವನ್ನು ಠೇವಣಿ ಮಾಡಿದವರಿಗೂ ಉತ್ತಮ ಆದಾಯ ಸಿಗಬೇಕು. ಪತ್ತಿನ ಸಂಘವನ್ನು ವ್ಯವಸ್ಥಿತವಾಗಿ ನಡೆಸಿ, ಭವಿಷ್ಯದಲ್ಲಿ ಅದನ್ನೊಂದು ಬ್ಯಾಂಕ್ ಆಗಿ ಪರಿವರ್ತನೆ ಆಗಬೇಕು. ಅಷ್ಟರ ಮಟ್ಟಿಗೆ ವ್ಯವಸ್ಥಿತವಾಗಿ ರೂಪರೇಷೆಗಳನ್ನು ಸಿದ್ಧಪಡಿಸಲಾಗಿದೆ. ಸದ್ಯ ಷೇರು ಸಂಗ್ರಹಣೆ ಆದ ನಂತರ ಪತ್ತಿನ ಸಂಘ ಆರಂಭವಾಗಲಿದೆ.

**–ಎಂ.ಎಂ. ನಿಟ್ಟಾಲಿ, ಖಜಾಂಚಿ**












**ಸುವರ್ಣಗಿರಿ ತಾಂಡಾದ ವಿದ್ಯಾರ್ಥಿನಿಯರ ಮೇಲೆ ಕಲುಷಿತ ಬಣ್ಣ ಎರಚಿದ ಕಿಡಿಗೇಡಿಗಳು**

# ವಿದ್ಯಾರ್ಥಿನಿಯರು ಅಸ್ವಸ್ಥ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಸುವರ್ಣಗಿರಿ ತಾಂಡಾದ ವಿದ್ಯಾರ್ಥಿನಿಯರು ಲಕ್ಷ್ಮೇಶ್ವರಕ್ಕೆ ಶಾಲೆಗೆ ಬರುವ ವೇಳೆ ಬಸ್ಸಿನಲ್ಲಿ ಕುಳಿತಿದ್ದಾಗ ಅದೇ ಗ್ರಾಮದ ಕೆಲ ಕಿಡಗೇಡಿ ಯುವಕರ ಗುಂಪು ಕಲುಷಿತ (ಮಿಶ್ರಿತ) ಬಣ್ಣ ಎರಚಿದ್ದರಿಂದ ನಾಲ್ಕೈದು ವಿದ್ಯಾರ್ಥಿನಿಯರು ಅಸ್ವಸ್ಥಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆಗೊಳಗಾದ ಘಟನೆ ಶುಕ್ರವಾರ ಜರುಗಿದೆ.

ತಾಲೂಕಿನ ಸುವರ್ಣಗಿರಿ ತಾಂಡಾದಿಂದ 10ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಲಕ್ಷ್ಮೇಶ್ವರದ ಉಮಾ ವಿದ್ಯಾಲಯ ಹೈಸ್ಕೂಲ್‌ಗೆ ಬರಲು ಬಸ್ ಹತ್ತಿದ್ದರು. ಈ ಸಂದರ್ಭದಲ್ಲಿ ಅದೇ ಗ್ರಾಮದ ಕೆಲವು ವಿದ್ಯಾರ್ಥಿಗಳನ್ನೊಳಗೊಂಡ ಯುವಕರ ಗುಂಪು ವಿದ್ಯಾರ್ಥಿನಿಯರ ಮೇಲೆ ಬಣ್ಣ ಎರಚಲು ಬಂದಾಗ, ವಿದ್ಯಾರ್ಥಿನಿಯರು (8/9ನೇ ತರಗತಿ) ಪರೀಕ್ಷೆ ಬರೆಯಲು ಹೊರಟಿದ್ದೇವೆ, ಬಣ್ಣ ಹಾಕಬೇಡಿ ಎಂದು ದೌಡಾಯಿಸಿ ಬಸ್ಸಿನೊಳಗೆ ಹತ್ತಿದ್ದಾರೆ. ಈ ವೇಳೆ ಬಸ್ಸಿನ ಚಾಲಕ-ನಿರ್ವಾಹಕರು ಯುವಕರಿಗೆ ಬಣ್ಣ ಎರಚಬೇಡಿ ಎಂದು ತಿಳಿಸಿ ಬಸ್ಸನ್ನು ಅಲ್ಲಿಂದ ಬಿಡುತ್ತಿದ್ದಂತೆಯೇ ಕಿಡಿಕೇಡಿ ಯುವಕರು ವಿದ್ಯಾರ್ಥಿನಿಯರಿದ್ದ ಬಸ್ಸಿನೊಳಗೆ ಕಲುಷಿತ ಬಣ್ಣ (ಮೊಟ್ಟೆ, ಗೊಬ್ಬರ, ಕೋಲ್ಡ್ರಿಂಕ್ಸ್ ಮಿಶ್ರಿತ) ಎರಚಿದ್ದಾರೆ. ಬಸ್ಸಿನ ತುಂಬ ಕೆಟ್ಟ ವಾಸನೆ ಹರಡಿದ್ದರಿಂದ ಬಸ್ಸಿನೊಳಗಿದ್ದ ವಿದ್ಯಾರ್ಥಿನಿಯರು ವಾಂತಿ ಮಾಡಿಕೊಂಡಿದ್ದಾರೆ. ಮಾರ್ಗದಲ್ಲಿಯೇ ವಿದ್ಯಾರ್ಥಿಗಳನ್ನು ಬೇರೆ ಬಸ್ಸಿಗೆ ಹತ್ತಿಸಲಾಗಿದೆ.

ಲಕ್ಷ್ಮೇಶ್ವರದಲ್ಲಿ ಬಂದು ಇಳಿಯುತ್ತಿದ್ದಂತೆಯೇ ವಿದ್ಯಾರ್ಥಿನಿಯರು ವಾಂತಿ, ಉಸಿರಾಟದ ತೊಂದರೆಗೊಳಗಾಗಿದ್ದಾರೆ. ಕೂಡಲೇ ಸಾರ್ವಜನಿಕರು, ಶಾಲೆಯ ಶಿಕ್ಷಕರು ವಿದ್ಯಾರ್ಥಿನಿಯರನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಅದರಲ್ಲಿ ಗೌರಿ ಪೂಜಾರ, ದಿವ್ಯಾ ಲಮಾಣಿ ಎಂಬಿಬ್ಬರು ತೀವ್ರ ಉಸಿರಾಟದ ತೊಂದರೆಯಿಂದ ನರಳಾಡುತ್ತಿರುವುದರಿಂದ ಅವರನ್ನು ಗದಗ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳೀಯ ಸಮುದಾಯ ಅರೋಗ್ಯ ಕೇಂದ್ರದಲ್ಲಿ ಅಂಕಿತಾ ಲಮಾಣಿ, ತನುಷಾ ಲಮಾಣಿ ಎಂಬ ವಿದ್ಯಾರ್ಥಿನಿಯರು ಚಿಕಿತ್ಸೆ ಪಡೆಯುತ್ತಿದ್ದಾರೆ.

ಸುದ್ದಿ ತಿಳಿಯುತ್ತಿದ್ದಂತೆ ಶಾಲೆಯ ಶಿಕ್ಷಕರು, ಪೊಲೀಸರು ಆಸ್ಪತ್ರೆ ದೌಡಾಯಿಸಿದರು. ಘಟನೆಯಿಂದ ಸುವರ್ಣಗಿರಿ ತಾಂಡಾದಲ್ಲಿ ತೀವ್ರ ವಾಗ್ವಾದ, ಜಗಳ ನಡೆಸಿದ್ದಾರೆ. ಪಿಎಸ್‌ಐ ನಾಗರಾಜ ಗಡಾದ ಆಸ್ಪತ್ರೆಗೆ ಭೇಟಿ ನೀಡಿ ವಿದ್ಯಾರ್ಥಿನಿಯರ ಆರೋಗ್ಯ ವಿಚಾರಿಸಿದ್ದಾರೆ. ಗ್ರಾಮಕ್ಕೆ ಭೇಟಿ ನೀಡಿ ಕೃತ್ಯದಲ್ಲಿ ಪಾಲ್ಗೊಂಡಿದ್ದ ಇಬ್ಬರು ವಿದ್ಯಾರ್ಥಿಗಳನ್ನು ವಶಕ್ಕೆ ಪಡೆದು ಮಾಹಿತಿ ಪಡೆದು ಅಗತ್ಯ ತನಿಖೆ ಕೈಗೊಂಡಿದ್ದಾರೆ.

**ಕೆ.ಎಚ್. ಪಾಟೀಲ ಸ್ಕೂಲ್ ಆಫ್ ಲಾ ಉದ್ಘಾಟನೆ ನೆರವೇರಿಸಿದ ಎಂ.ಎನ್. ವೆಂಕಟಾಚಲಯ್ಯ**

# ಗುಣಮಟ್ಟದ ಕಾನೂನು ಶಿಕ್ಷಣ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪ್ರವಾಹೋಪಾದಿಯಲ್ಲಿ ಸಾಧನೆ ಮಾಡುವ ಹಂಬಲ ಉಳ್ಳವರನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಇಂತಹ ಗುಣವನ್ನು ಕೆ.ಎಚ್. ಪಾಟೀಲ ಅವರು ಹೊಂದಿದ್ದು, ಬೆಂಗಳೂರಿನ 'ಕೆ.ಎಚ್.ಪಾಟೀಲ್ ಸ್ಕೂಲ್ ಆಫ್ ಲಾ' ಉದ್ಘಾಟಿಸಲು ನನಗೆ ಸಂತೋಷ ಎನಿಸುತ್ತಿದೆ ಎಂದು ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ಮುಖ್ಯ ನ್ಯಾಯಮೂರ್ತಿಗಳಾದ ಎಂ.ಎನ್. ವೆಂಕಟಾಚಲಯ್ಯ ಹೇಳಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಶುಕ್ರವಾರ ಸಂಜೆ ಸಹಕಾರ ರಂಗದ ಭೀಷ್ಮ ಕೆ.ಎಚ್. ಪಾಟೀಲ ಅಭಿಮಾನಿ ಬಳಗ, ಬೆಂಗಳೂರು ನಗರದ ವಿವಿಧ ಸಹಕಾರ ಸಂಘಗಳು ಹಾಗೂ ಸಹಕಾರ ರಂಗದ ಭೀಷ್ಮ ಕೆ.ಎಚ್. ಪಾಟೀಲ ಮೆಮೋರಿಯಲ್ ಟ್ರಸ್ಟ್ ಬೆಂಗಳೂರು ಇವರು ಹಮ್ಮಿಕೊಂಡಿದ್ದ ಕೆ.ಎಚ್. ಪಾಟೀಲ ಜನ್ಮ ಶತಮಾನೋತ್ಸವ ಆಚರಣೆ ಮತ್ತು ಕೆ.ಎಚ್. ಪಾಟೀಲ ಸ್ಕೂಲ್ ಆಫ್ ಲಾ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಉದ್ಯೋಗ ಮತ್ತು ಸಂಪಾದನೆ ಯಾರು ಬೇಕಾದರೂ ಮಾಡಬಹುದು. ವಿದ್ಯಾರ್ಥಿಗಳು ಇದಕ್ಕಿಂತ ಮುಖ್ಯವಾಗಿ ಅತ್ಯುನ್ನತ ಧ್ಯೇಯಗಳೊಂದಿಗೆ ಗುಣಮಟ್ಟದ ಶಿಕ್ಷಣ ಹೊಂದಬೇಕೆಂದರು.

ಮುಖ್ಯ ಅತಿಥಿಗಳಾಗಿ ಸಚಿವರಾದ ಕೆ.ಎಚ್. ಮುನಿಯಪ್ಪ, ರಾಮಲಿಂಗಾರೆಡ್ಡಿ, ಪ್ರಿಯಾಂಕ್ ಖರ್ಗೆ, ದಿನೇಶ್ ಗುಂಡೂರಾವ್, ಶರಣಗೌಡ ಪಾಟೀಲ, ಎನ್.ಎಸ್. ಬೋಸರಾಜು, ಕೃಷ್ಣ ಬೈರೇಗೌಡ, 5ನೇ ಹಣಕಾಸು ಆಯೋಗದ ಅಧ್ಯಕ್ಷ ಡಾ. ಸಿ. ನಾರಾಯಣಸ್ವಾಮಿ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯ-ರೆಡ್ಡಿ, ತಿಮ್ಮಾಪುರ, ರುದ್ರಪ್ಪ ಲಮಾಣಿ, ಶಾಸಕ ರಿಜ್ವಾನ್ ಹರ್ಷದ್ ಸೇರಿದಂತೆ ರಾಜ್ಯದ ವಿವಿಧ ಕ್ಷೇತ್ರಗಳಿಂದ ಆಗಮಿಸಿದ ಹಲವಾರು ಶಾಸಕರು, ಸಹಕಾರಿ ಸಂಘಗಳ ಧುರೀಣರು, ಪಾಟೀಲರ ಅಭಿಮಾನಿಗಳು ಮತ್ತಿತರರು ಇದ್ದರು.

ಮಾಜಿ ಮುಖ್ಯಮಂತ್ರಿ, ಕೇಂದ್ರದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಾಜಿ ಸಚಿವ ಎಂ. ವೀರಪ್ಪ ಮೊಯಿಲಿ ಲಾ ಶಾಲೆಯ ಲಾಂಛನ ಉದ್ಘಾಟಿಸಿದರು. ಇಂಧನ ಸಚಿವ ಕೆ.ಜೆ. ಜಾರ್ಜ್, ಮಾಜಿ ಸಚಿವ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ. ದೇಶಪಾಂಡೆ, ವಿ.ಪ ಸಭಾಪತಿ ಬಸವರಾಜ್ ಎಸ್.ಹೊರಟ್ಟಿ, ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಫರೀದ್, ಅಧ್ಯಕ್ಷತೆ ವಹಿಸಿದ್ದ ಗೃಹಮಂತ್ರಿ ಡಾ. ಜಿ. ಪರಮೇಶ್ವರ್ ಮಾತನಾಡಿ, ಕೆ.ಎಚ್. ಪಾಟೀಲರನ್ನು ಸ್ಮರಿಸಿದರು.

ಇದಕ್ಕೂ ಮುನ್ನ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ತಂಡದವರಿಂದ ಕೆ.ಎಚ್.ಪಾಟೀಲ ಲಾವಣಿ ಪ್ರಸ್ತುತ ಪಡಿಸಿದರೆ, ರೇವತಿ ಕುಮಾರ್ ಪತ್ತಾರ್ ಅವರಿಂದ ಸಂಗೀತ ಕಾರ್ಯಕ್ರಮ ಜರುಗಿ-ತು. ಶಂಕರ್ ಪ್ರಕಾಶ್ ನಿರೂಪಿಸಿದರು.

**ವಾಲ್ಮಿ ಸಂಸ್ಥೆಯ ಸಹಯೋಗದಲ್ಲಿ ಜಲ-ನೆಲ ಸಂರಕ್ಷಣೆ, ನಿರ್ವಹಣೆ ಕುರಿತು ಕಾರ್ಯಾಗಾರ**

# ಮಣ್ಣಿನ ಆರೋಗ್ಯ ಕಾಪಾಡುವ ಬದ್ಧತೆಯಿರಲಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೃಷಿ ನಮ್ಮ ಸಂಸ್ಕೃತಿ-ಬದುಕಾಗಿದ್ದು, ಮನುಷ್ಯ ಸೇರಿ ಸಕಲ ಜೀವರಾಶಿಗಳ ಬದುಕಿಗೆ ನೀರು ಮತ್ತು ಮಣ್ಣೇ ಆಧಾರವಾಗಿದೆ. ಮಣ್ಣು ಮತ್ತು ನೀರಿನ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಎಂದು ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ(ವಾಲ್ಮಿ)ಯ ಪ್ರಾಧ್ಯಾಪಕ ಪ್ರದೀಪ ದೇವರಮನಿ ಹೇಳಿದರು.

ಅವರು ಗುರುವಾರ ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ವಾಲ್ಮಿ ಸಂಸ್ಥೆಯ ಸಹಯೋಗದಲ್ಲಿ ಎನ್‌ಎಸ್‌ಎಸ್ ಘಟಕ ಮತ್ತು ಸಿವಿಲ್ ಇಂಜಿನಿಯರಿಂಗ್ ವಿಭಾಗದ ಸಹಕಾರದಲ್ಲಿ ಜಲ ಮತ್ತು ನೆಲ ಸಂರಕ್ಷಣೆ ಹಾಗೂ ನಿರ್ವಹಣೆ ಕುರಿತು ರೈತರಿಗಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರದಲ್ಲಿ ಮಾತನಾಡಿದರು.

ರೈತರ ಜೀವನಾಡಿಯಾದ ಮಣ್ಣಿನ ಆರೋಗ್ಯ ಕಾಪಾಡುವುದು ಇಂದಿನ ಪ್ರಮುಖ ಆದ್ಯತೆಯಾಗಬೇಕು. ಅದಕ್ಕಾಗಿ ರೈತ ಸಮುದಾಯ ಕೃಷಿಯಲ್ಲಿ ಸಾವಯವ ಗೊಬ್ಬರ, ಔಷಧೋಪಚಾರ ಬಳಸುವ ಮೂಲಕ ಹಿರಿಯರು ನಮಗೆ ಕೊಟ್ಟ ಆರೋಗ್ಯಭರಿತ ಮಣ್ಣನ್ನು ಕಾಪಾಡಬೇಕು. ರೈತರು ರಾಸಾಯನಿಕ ಗೊಬ್ಬರ ಬಳಕೆಯಿಂದ ಹೆಚ್ಚು ಇಳುವರಿ ಪಡೆಯಬಹುದು ಎಂಬುದು ತಪ್ಪು ಕಲ್ಪನೆ. ಇದರಿಂದ ಭೂಮಿಯ ಫಲವತ್ತತೆ ಕಡಿಮೆಯಾಗಿ ಬೆಳೆದ ಫಸಲು ಹಲವಾರು ಮಾರಣಾಂತಿಕ ರೋಗಕ್ಕೆ ತುತ್ತಾಗುತ್ತದೆ ಎಂದು ವಿವರಿಸಿದರು.

ವಾಲ್ಮಿಯ ಸಹಾಯಕ ಅಭಿಯಂತರ ಮಹದೇವಗೌಡ ಹುತ್ತನಗೌಡ್ರ ಮಾತನಾಡಿ, ನೀರು ಪೋಲಾಗುವುದನ್ನು ತಡೆಯುವುದು, ಬೆಳೆಗೆ ಹಾಕಿದ ಪೋಷಕಾಂಶ ನಷ್ಟವಾಗದಂತೆ ನೋಡಿಕೊಳ್ಳುವುದು ಅತ್ಯಗತ್ಯ. ಹನಿ ನೀರಾವರಿ ಮೂಲಕ ರಾಸಾಯನಿಕ ಗೊಬ್ಬರಗಳನ್ನು ಕೊಡುವುದರಿಂದ ಶೇ 90-99ರಷ್ಟು ಗೊಬ್ಬರ ಬಳಕೆಯಾಗಿ ಬೆಳೆ ಇಳುವರಿ ಶೇ.20ರಿಂದ 50ರಷ್ಟು ಪ್ರಮಾಣ ಹೆಚ್ಚಾಗಲಿದೆ ಎಂಬುದನ್ನು ವಿವಿಧ ಪ್ರಯೋಗಗಳಿಂದ ಕಂಡುಕೊಳ್ಳಲಾಗಿದೆ ಎಂದು ವಿವರಿಸಿದರು.

ಸಹಾಯಕ ಕೃಷಿ ಅಧಿಕಾರಿ ರೇವಣಪ್ಪ ಮನಗೂಳಿ, ಕೃಷಿ ಸಹಾಯಕ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಡಾ. ಹಯವದನ, ಪ್ರೊ. ಸ್ವಪ್ನ ಚನ್ನಗೌಡರ, ರೈತ ಮುಖಂಡರಾದ ಟಾಕಪ್ಪ ಸಾತಪುತೆ, ಚನ್ನಪ್ಪ ಷಣ್ಮುಕಿ, ಶಿವಾನಂದ ಮೂಲಿಮನಿ, ಶಿವಾನಂದ ದೇಸಾಯಿ, ಎಸ್.ಕೆ. ಕಾಳಪ್ಪನವರ, ದೇವಪ್ಪ ತೋಟದ, ಮುತ್ತಣ್ಣ ಬಟ್ಟೂರ ಸೇರಿ ಲಕ್ಷ್ಮೇಶ್ವರ, ಶಿಗ್ಲಿ, ರಾಮಗೇರಿ, ಒಡೆಯರ ಮಲ್ಲಾಪುರ, ಗೊಜನೂರ, ಗೋವನಾಳ, ರಾಮಗೇರಿ, ಅಡರಕಟ್ಟಿ ಸೇರಿ ಹಲವು ಗ್ರಾಮಗಳ ನೂರಾರು ರೈತರು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

ಕಾಲೇಜಿನ ಆಡಳಿತಾಧಿಕಾರಿ ಪ್ರೊ. ವಿಕ್ರಂ ಶಿರೋಳ ಪ್ರಾಸ್ತಾವಿಕ ನುಡಿದರು. ಪ್ರೊ. ಶಿವರಾಜಕುಮಾರ ಗೌಡರ, ಎನ್‌ಎಸ್‌ಎಸ್ ಸಂಯೋಜಕ ಪ್ರೊ. ಸೋಮಶೇಖರ ಕೆರಿಮನಿ, ಪ್ರೊ, ಷಣ್ಮುಕ ಗಡ್ಡೆಣ್ಣವರ ನಿರ್ವಹಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಮಾತನಾಡಿ, ಜೀವರಾಶಿಗಳಿಗೆ ಅನ್ನದಾತನ ಬದುಕು ಹಸನಾದಾಗಲೇ ದೇಶ ಸಮೃದ್ಧಿಯ ದಿಕ್ಕಿನಲ್ಲಿ ಸಾಗುತ್ತದೆ. ಕೃಷಿ ಕ್ಷೇತ್ರದಲ್ಲಿ ತಂತ್ರಜ್ಞಾನದ ಅಗತ್ಯತೆಯ ನಡುವೆಯೂ ಭವಿಷ್ಯದ ದೃಷ್ಟಿಯಿಂದ ಮಣ್ಣು-ನೀರಿನ ಸಂರಕ್ಷಣೆ ಅತ್ಯಗತ್ಯವಾಗಿದೆ. ಈ ಕಾರ್ಯದಲ್ಲಿ ದೇಶದ ಬೆನ್ನೆಲುಬಾದ ರೈತರ ಪಾತ್ರ ಮಹತ್ವದ್ದಾಗಿದ್ದು, ರೈತರಲ್ಲಿ ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿರುವ ವಾಲ್ಮಿ ಸಂಸ್ಥೆಯ ಕಾರ್ಯ-ಚಟುವಟಿಕೆಗಳಿಗೆ ಕಾಲೇಜಿನ ಸಂಪೂರ್ಣ ಸಹಕಾರವಿರಲಿದೆ ಎಂದರು.

# ರೇಣುಕರು ವೀರಶೈವ ಧರ್ಮದ ಮಹಾನ್ ಶರಣರು



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜ. ರೇಣುಕಾಚಾರ್ಯರು ವೀರಶೈವ ಧರ್ಮದ ಮಹಾನ್ ಶರಣ ಮತ್ತು ಗುರುಗಳಲ್ಲಿ ಒಬ್ಬರು. ಇವರ ತತ್ವ, ಬದುಕಿನ ಚರಿತ್ರೆ ಮತ್ತು ಧಾರ್ಮಿಕ ಸಾಧನೆಗಳು ಭಾರತೀಯ ಸಾಮಾಜಿಕ ಮತ್ತು ಧಾರ್ಮಿಕ ಚರಿತ್ರೆಯಲ್ಲಿ ಮಹತ್ವಪೂರ್ಣ ಸ್ಥಾನವನ್ನು ಪಡೆದಿವೆ. ಇವರ ಬದುಕು ಮತ್ತು ತತ್ವಗಳನ್ನು ವಿವರಿಸುವ ಹಲವು ಪುರಾಣ ಮತ್ತು ಗ್ರಂಥಗಳಿವೆ ಎಂದು ತಹಸೀಲ್ದಾರ ಅನಿಲ ಬಡಿಗೇರ ಹೇಳಿದರು.

ಅವರು ಗುರುವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ತಾಲೂಕಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಜ.ರೇಣುಕಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಪೂಜ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ರೇಣುಕಾಚಾರ್ಯರು ಎಲ್ಲ ವರ್ಗಗಳನ್ನು ಪ್ರೀತಿಸಿ ಅವರಿಗೆ ತತ್ವಶಾಸ್ತ್ರದ ಮತ್ತು ಧಾರ್ಮಿಕ ಶಿಕ್ಷಣವನ್ನು ನೀಡಿದರು.

ಸಮಾನತೆ ಎಂಬ ತತ್ವ-ಕ್ಕೆ ಮಹತ್ವ ನೀಡಿ ತಮ್ಮ ವಚನಗಳ ಮೂಲಕ ತಮ್ಮ ತತ್ವಗಳನ್ನು ಜನರಿಗೆ ತಿಳಿಸಿಕೊಟ್ಟರು. ವಚನಗಳು ಜನರಿಗೆ ಶ್ರಮ, ಇಷ್ಟಲಿಂಗ ಧರಿಸುವ ಮೂಲಕ ನಿತ್ಯ ಶಿವನೊಂದಿಗೆ ಸಂಬಂಧವನ್ನು ಕಾಪಾಡಬೇಕೆಂಬ ತತ್ವವನ್ನು ಬೋಧಿಸಿ, ದೇವರನ್ನು ಹೊರಗಿನ ಪ್ರತಿಮೆಗಳಲ್ಲದೆ ತಮ್ಮ ಅಂತರಾಳದಲ್ಲಿ ಹ'ುಡ'ುಕ'ಬ'ೇಕ'ೆಂಬ ನಂಬಿಕೆಯನ್ನು ಪಸರಿಸಿದ ಮಹಾನ್ ಶರಣರು. ಇವರ ಬದುಕು ಮತ್ತು ತತ್ವಗಳು ಕನ್ನಡ ಸಮಾಜಕ್ಕೆ ಮಾತ್ರವಲ್ಲದೇ ಜಾಗತಿಕ ಪ್ರಾಮುಖ್ಯತೆಯನ್ನು ಹೊಂದಿದೆ ಎಂದರು.

ಕೆಪಿಸಿಸಿ ಪ್ರ.ಕಾ. ಸುಜಾತಾ ದೊಡ್ಡಮನಿ, ಜೀತು ಪಾಟೀಲ ಮತ್ತು ವೀರಶೈವ ಸಮಾಜದ ಮುಖಂಡರು, ಕಂದಾಯ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 15ರಂದು ನೀರು ಪೂರೈಕೆಯಾಗುವ ಸ್ಥಳಗಳ ಮಾಹಿತಿ ಹೀಗಿದೆ. ವಾರ್ಡ್ ನಂ 30, 27, 34ರಲ್ಲಿ ಟಿ.ವಿ.ಎಸ್. ಸ್ಟೋರ್ ರಸ್ತೆ ಮುತ್ತಿನಪೆಂಡಿಮಠ, ಎಸ್.ಪಿ. ಆಫೀಸ್, ಪೊಲೀಸ್ ಕ್ವಾರ್ಟರ್ಸ್, ಸಂಕಣ್ಣವರ ಲೇಔಟ್, ಕೇಶವನಗರ ಪುಟ್ಟರಾಜ ನಗರ, ರೋಣದವರ, ವಡ್ಡರಗೇರಿ, 4ರ ಪ್ಲಾಟ್, ಕೊರವರ ಓಣಿ, ಮೂರಶಿಳ್ಳಿನ ವಹಾರ ಡಿಪೋ ಹಿಂದಿನ ಭಾಗ, ಹೂಗಾರ ಪ್ಲಾಟ್, ಶಿವಾನಂದ ಗಾರ್ಡನ್, ಉಳಿದ ಭಾಗಗಳು, ವಾರ್ಡ್ ನಂ.7ರಲ್ಲಿ ಪೆಂಡರ ಓಣಿ, ಶಿವನಗೌಡ್ರ ಓಣಿ, ನಂದರಗಿಯವರ ಲೈನ್, ಬಚ್ಚುಲಕ್ಕಮ್ಮನ ಗುಡಿ, ನದಾಫ್ ಗಲ್ಲಿ, ಅಬ್ಬಿಗೇರಿ, ಮಲ್ಲೇಶಪ್ಪ ಗಚ್ಚಿಯವರ ವಾರ್ಡ್ ನಂ.16ರಲ್ಲಿ ಗುಡದೂರಸ್ವಾಮಿಮಠ ಎಡಭಾಗ, ಬಲಭಾಗ, ರಹಿಮತ ನಗರದ ಕೆಲವು ಭಾಗಗಳು, ವಾರ್ಡ್ ನಂ 28, ದೇವಗಿರಿಯವರ ಲೈನ್, ಅನ್ನಪೂರ್ಣ ಅಪಾರ್ಟಮೆಂಟ್, ಕೋರ್ಲಹಳ್ಳಿ ಮಾಸ್ತರ, ಅಬ್ಬಿಗೇರಿ, ಗವಾಯಿಗಳ ಆಶ್ರಮ, ಸೊಲ್ಲಾಪಟ್ಟಿ ಲೈನ್, ಕೃಷ್ಣಾ ಟ್ಯೂಷನ್ ಲೈನ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ.3ರಲ್ಲಿ, ಹುಯಿಲಗೋಳ ರಸ್ತೆ ಎಡಭಾಗ, ಪೂರ್ತಿ ಬಣ್ಣದನಗರ, ರಾಜಾಜಿ ರಸ್ತೆ ಕುಂಬಾರ ಓಣಿ, ಅಯ್ಯಪ್ಪಜ್ಜನ ಗದ್ದುಗೆ, ಕಬಾಡಿಯವರ ರಸ್ತೆ, ಹುಯಿಲಗೋಳ ಮಸೂತಿ, ಕೆ.ಇ.ಬಿ ಭಾಗ-2 ಉಳಿದ ಭಾಗಗಳಲ್ಲಿ ನೀರು ಪೂರೈಕೆಯಾಗಲಿದೆ. ತುಂಗಭದ್ರಾ ನದಿಯಿಂದ ಸರಬರಾಜಾಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾತದೆ. ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕು. ತಮ್ಮ ನೀರಿನ ಕರ ಪಾವತಿಸುವಲ್ಲಿ ವಿಳಂಬ ಮಾಡದೇ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕು. ತಪ್ಪಿದಲ್ಲಿ ದಂಡ ವಿಧಿಸಿ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ



ಮುಳಗುಂದ, 14. ಪಟ್ಟಣದ ಪುರದ ಓಣಿಯ ನಿವಾಸಿ ಗಂಗಮ್ಮಾ ಹುಣಶಿಮರದ (75) ಶುಕ್ರವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

**ರಾಜ್ಯ ಮಟ್ಟದ ವಿಶೇಷ ಸಹಕಾರ ತರಬೇತಿ ಕಾರ್ಯಕ್ರಮದಲ್ಲಿ ಡಾ. ಸುರೇಶಗೌಡ ಪಾಟೀಲ**

# ನಬಾರ್ಡ್ ಸೌಲಭ್ಯಗಳು ಅರ್ಹರಿಗೆ ತಲುಪುತ್ತಿವೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಕೆ.ಸಿ.ಸಿ. ಬ್ಯಾಂಕ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಎಲ್ಲಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ರಾಜ್ಯ ಮಟ್ಟದ ವಿಶೇಷ ಸಹಕಾರ ತರಬೇತಿ ಕಾರ್ಯಕ್ರಮವನ್ನು ದಿ. ಚೇಂಬರ್ ಆಫ್ ಕಾಮರ್ಸ್‌ನ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಬೆಳಗಾವಿ ಪ್ರಾಂತ್ಯದ ಸಹಕಾರ ಸಂಘಗಳ ಸಂಯುಕ್ತ ನಿಬಂಧಕರಾದ ಡಾ.ಸುರೇಶಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ, ಜ್ಞಾನದ ಅರಿವು ಮೂಡಿಸುವ ಕೆಲಸವನ್ನು ಇಂತಹ ಮಹಾಮಂಡಳ ಕಾರ್ಯಕ್ರಮಗಳು ನೆರವೇರಿಸುತ್ತಿವೆ. ಗದಗನಲ್ಲಿ 165 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿವೆ. ನಬಾರ್ಡ್‌ನಿಂದ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರು ಅರ್ಹ ರೈತರಿಗೆ ತಲುಪಿಸುತ್ತಿರುವುದು ಸಂತಸದ ಸಂಗತಿ ಎಂದರು.

ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳದ ಅಧ್ಯಕ್ಷರಾದ ಜಿ.ಪಿ. ಪಾಟೀಲ ಮಾತನಾಡುತ್ತ, ಭಾರತ ಕೃಷಿ ಪ್ರಧಾನ ದೇಶವಾಗಿದ್ದು, ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಕೃಷಿ ವಲಯ ತನ್ನದೇ ಆದ ಪಾತ್ರವನ್ನು ನಿರ್ವಹಿಸುತ್ತಿದೆ. ಇನ್ನು ಕೃಷಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಜೀವನಾಡಿಗಳಾಗಿವೆ. ಈ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಗ್ರಾಮೀಣ ಮಟ್ಟದಲ್ಲಿ ಸದಸ್ಯರಿಗೆ ಬ್ಯಾಂಕಿಂಗ್ ಸೇರಿದಂತೆ ಬಹುವಿಧದ ಸೇವೆಯನ್ನು ನಿಡುವುದಲ್ಲದೇ ಕೃಷಿ ಸಂಬಂಧಿತ ಸಾಲಗಳನ್ನು ನೀಡುವುದರಲ್ಲಿ ಮುಂಚೂಣಿಯಲ್ಲಿವೆ ಎಂದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಯುನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ, ಉಪಾಧ್ಯಕ್ಷ ವಾಯ್.ಎಫ್. ಪಾಟೀಲ, ಧಾರವಾಡ ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕ ಎಂ.ಎಫ್. ಕಲಗುಡಿ, ಜಿ.ವ್ಹಿ. ಪಾಟೀಲ, ಕೆ.ಸಿ.ಸಿ. ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುನಿತಾ ಸಿದ್ರಾಮ, ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ, ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಇಲಾಖೆಯ ಉಪನಿರ್ದೇಶಕ ಅರವಿಂದ ಎನ್.ನಾಗಜ್ಜನವರ, ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಪುಷ್ಪಾ ಕೆ.ಕಡಿವಾಳ, ಕೆ.ಸಿ.ಸಿ. ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರಾದ ಎಸ್.ವ್ಹಿ. ಹೂಗಾರ, ರೋಣ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವ್ಯಾಪಾರ ಅಭಿವೃದ್ಧಿ ಯೋಜನೆ ಕುರಿತು ಪ್ರೊ. ಸಿದ್ದು ಯಾಪಲಪರವಿ, ಕೃಷಿಯಲ್ಲಿ ನ್ಯಾನೋ ಯೂರಿಯಾ ಹಾಗೂ ಡಿ.ಎ.ಪಿ ಇವುಗಳ ಬಳಕೆ ಕುರಿತು ಗಣೇಶ ಎಸ್.ಎನ್, ಸಹಕಾರಿ ಕಾಯಿದೆ ಮುಖ್ಯಾಂಶಗಳು ಹಾಗೂ ಪ್ಯಾಕ್ಸ್‌ಗಳ ಬಲವರ್ಧನೆ ಕುರಿತು ಎಸ್.ಜಿ. ಸುಣಗಾರ ಉಪನ್ಯಾಸ ನೀಡಿದರು.

ಶ್ರೀದೇವಿ ರಾಮಣ್ಣನವರ ಪ್ರಾರ್ಥಿಸಿದರು. ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ರಶೀದಾಬಾನು ಸಿ.ಯಲಿಗಾರ ವಂದಿಸಿದರು.

ಕೆ.ಸಿ.ಸಿ ಬ್ಯಾಂಕ್ ಧಾರವಾಡದ ಅಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ದೇಶದಾದ್ಯಂತ ಸುಮಾರು 65000 ಕೃಷಿ ಪತ್ತಿನ ಸಹಕಾರ ಸಂಘಗಳು ಕ್ರಿಯಾಶೀಲ ಸೇವೆ ಸಲ್ಲಿಸುತ್ತಿವೆ. 2012ರಲ್ಲಿ ಕೇಂದ್ರ ಸರ್ಕಾರ ಸಹಕಾರ ಸಚಿವಾಲಯವನ್ನು ಆರಂಭಿಸಿದ ಮೇಲೆ ಸಹಕಾರ ಕ್ಷೇತ್ರದ ಬಲವರ್ಧನೆಗೆ ವಲಯವಾರು ತರಬೇತಿ ನೀಡುವ ಮಾದರಿಗಳನ್ನು ಗುರುತಿಸಿ ಅವುಗಳ ಮೂಲಕ ಸಹಕಾರ ಕ್ಷೇತ್ರವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಬೆಳೆಸಲು ಅಗತ್ಯವಾದ ಬೆಂಬಲ ಹಾಗೂ ಪ್ರೋತ್ಸಾಹವನ್ನು ನೀಡುತ್ತಿದೆ ಎಂದರು.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಮಾರ್ಚ್ 15 ಮತ್ತು 16 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ಕಾರ್ಯಕ್ರಮದ ವಿವರ ಇಂತಿದೆ.

ಮಾರ್ಚ್ 15 ರಂದು ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 9.30 ಗಂಟೆಗೆ ಗದುಗಿಗೆ ಆಗಮಿಸುವರು. ಬೆಳಿಗ್ಗೆ 10.30 ಗಂಟೆಗೆ ಹುಲಕೋಟಿಯ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ ಡಿ.ಪಿ.ಆರ್.ಸಿ. ಬಿಲ್ಡಿಂಗ್ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆ 11 ಗಂಟೆಗೆ ಹುಲಕೋಟಿ ಗ್ರಾಮದ ಶ್ರೀ ಕರಿಯಮ್ಮ ದೇವಿ ತೇರಿನ ಮಂಟಪ ಕಟ್ಟಡದ ಉದ್ಘಾಟನೆಯಲ್ಲಿ ಪಾಲ್ಗೊಳ್ಳುವರು. ಮಾರ್ಚ್ 16 ರಂದು ಬೆ 8.45 ಗಂಟೆಗೆ ಹುಲಕೋಟಿಯ ಎಂ.ಕೆ.ಬಿ.ಎಸ್. ಶಾಲೆಯ ನವೀಕೃತಗೊಂಡ ಕಟ್ಟಡದ ಉದ್ಘಾಟನೆ, ಬೆ 9 ಗಂಟೆಗೆ ಹುಲಕೋಟಿ ಗ್ರಾಮ ಪಂಚಾಯತಿ ಕಟ್ಟಡದ ಉದ್ಘಾಟನೆ, ಬೆ 9.15 ಗಂಟೆಗೆ ಬಿಂಕದಕಟ್ಟಿ ಗ್ರಾಮ ಪಂಚಾಯತಿ ಕಟ್ಟಡದ ಉದ್ಘಾಟನೆ , ಬೆ 10 ಗಂಟೆಗೆ ಗದಗ ಬಿಂಕದಕಟ್ಟಿ ರಸ್ತೆ ಗದಗ ಮೃಗಾಲಯದ ಹತ್ತಿರದಲ್ಲಿ ಗದಗ ಮೃಗಾಲಯದ ಅಭಿವೃದ್ಧಿಗಾಗಿ ಭೂಸ್ವಾಧೀನಪಡಿಸಿಕೊಂಡ ಭೂಮಿಯ ಶಂಕುಸ್ಥಾಪನೆ , ವಲಯ ಅರಣ್ಯ ಅಧಿಕಾರಿಗಳ ನೂತನ ಕಚೇರಿ, ನೂತನ ವಸತಿ ಗೃಹ ಹಾಗೂ ಶಿಶುಗಳಿಗೆ ಹಾಲುಣಿಸುವ ಕೊಠಡಿ ಉದ್ಘಾಟನೆ ಹಾಗೂ ಕಪ್ಪತ್ತಗುಡ್ಡ ಪ್ರಕೃತಿ ಶಿಬಿರದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ 10.15 ಗಂಟೆಗೆ ನಗರದ ಗಾಂಧಿ ವೃತ್ತದಲ್ಲಿನ ಶ್ರೀ ಅನ್ನಪೂರ್ಣೆಶ್ವರಿ ಪ್ರಸಾದ ನಿಲಯದ ನೂತನ ಕಟ್ಟಡದ ಉದ್ಘಾಟನೆ, ಬೆ 11 ಗಂಟೆಗೆ ಗದಗ ಕಾಟನ್ ಸೇಲ್ ಸೊಸೈಟಿಯಲ್ಲಿ ಕೆ.ಎಚ್.ಪಾಟೀಲ ಜನ್ಮ ಶತಮಾನೋತ್ಸವ ಆಚರಣೆ ಹಾಗೂ ದಿ. ಗದಗ ಕೋ ಆಪರೇಟಿವ್ ಕಾಟನ್ ಸೇಲ್ ಸೊಸೈಟಿ ನವೀನ ಕಟ್ಟಡದ ಉದ್ಘಾಟನೆಯಲ್ಲಿ ಪಾಲ್ಗೊಳ್ಳುವರು. ರಾತ್ರಿ 10.30 ಗಂಟೆಗೆ ಹುಬ್ಬಳ್ಳಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### ಪತ್ರಿಕಾಗೋಷ್ಠಿಯಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ ಮಾಹಿತಿ

# ದಿ. ಕೆ.ಎಚ್. ಪಾಟೀಲ ಜನ್ಮ ಶತಮಾನೋತ್ಸವ 16ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಚ್. ಪಾಟೀಲ ಪ್ರತಿಷ್ಠಾನ ವತಿಯಿಂದ ದಿ. ಕೆ.ಎಚ್. ಪಾಟೀಲ ಜನ್ಮಶತಮಾನೋತ್ಸವ ಆಚರಣೆ, ಗದಗ ಕೋ-ಆಪರೇಟಿವ್ ಕಾಟನ್ ಸೇಲ್ ಸೊಸೈಟಿಯ ನೂತನ ಕಟ್ಟಡದ ಉದ್ಘಾಟನೆ ಕಾರ್ಯಕ್ರಮ ಮಾ. 16ರಂದು ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಶಾಸಕ, ಸಮಿತಿಯ ಅಧ್ಯಕ್ಷ ಡಿ.ಆರ್. ಪಾಟೀಲ ತಿಳಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕೆ.ಎಚ್. ಪಾಟೀಲ ಜನ್ಮಶತಮಾನೋತ್ಸವ ಸಂಭ್ರಮದ ಕಾರ್ಯಕ್ರಮವನ್ನು ಎಐಸಿಸಿ ಅಧ್ಯಕ್ಷ, ರಾಜ್ಯಸಭಾ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಉದ್ಘಾಟಿಸುವರು. ದಿ. ಗದಗ ಕೋ-ಆಪರೇಟಿವ್ ಕಾಟನ್ ಸೇಲ್ ಸೊಸೈಟಿಯ ನೂತನ ಕಟ್ಟಡವನ್ನು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು ಎಂದು ಮಾಹಿತಿ ನೀಡಿದರು.

ವಿ.ಪ ಸಭಾಪತಿ ಬಸವರಾಜ ಹೊರಟ್ಟಿ, ಡಿಸಿಎಂ ಡಿ.ಕೆ. ಶಿವಕುಮಾರ, ಸಹಕಾರ ಸಚಿವ ಕೆ.ಎನ್. ರಾಜಣ್ಣ ಘನ ಉಪಸ್ಥಿತಿ ವಹಿಸುವರು. ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಹಾಗೂ ಕೋ-ಆಪರೇಟಿವ್ ಫೆಡರೇಶನ್ ಅಧ್ಯಕ್ಷ ಜಿ.ಟಿ. ದೇವೇಗೌಡ, ಅರಣ್ಯ ಸಚಿವ ಈಶ್ವರ ಖಂಡ್ರೆ, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ, ವಿ.ಪ ಮಾಜಿ ಸಭಾಪತಿ ಬಿ.ಎಲ್. ಶಂಕರ, ಕಾರ್ಮಿಕ ಸಚಿವ ಸಂತೋಷ ಲಾಡ್, ಜವಳಿ, ಎಪಿಎಂಸಿ ಹಾಗೂ ಸಕ್ಕರೆ ಸಚಿವ ಶಿವಾನಂದ ಪಾಟೀಲ ಗೌರವ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಾನೂನು ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು ಎಂದರು.

ಸುದ್ದಿಗೋಷ್ಠಿಯಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಮಾಜಿ ಅಧ್ಯಕ್ಷ ಗುರಣ್ ಬಳಗಾನೂರ, ಗದಗ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಮುಖಂಡರಾದ ರವಿ ಮೂಲಿಮನಿ, ಎಲ್.ಡಿ. ಚಂದಾವರಿ ಮುಂತಾದವರಿದ್ದರು.




> ದಿ. ಕೆ.ಎಚ್. ಪಾಟೀಲರು 1954ರಲ್ಲಿ ರಾಜಕೀಯ ಜೀವನ ಆರಂಭಿಸಿ, ಸರಪಂಚರಾಗಿ, ಎಪಿಎಂಸಿ ಅಧ್ಯಕ್ಷರಾಗಿ, ದಿ. ಗದಗ ಕಾಟನ್ ಸೇಲ್ ಸೊಸೈಟಿ ಅಧ್ಯಕ್ಷರಾಗಿ, ರಾಜ್ಯದ ಪ್ರಭಾವಿ ಸಚಿವರಾಗಿ, ಕೆಪಿಸಿಸಿ ಅಧ್ಯಕ್ಷರಾಗಿ ಜನಪರ ಸೇವೆ ಸಲ್ಲಿಸಿದ್ದಾರೆ. ಸಹಕಾರಿ ರಂಗದಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಿದ್ದ ಕೆ.ಎಚ್. ಪಾಟೀಲರು ಎಪಿಎಂಸಿಯಲ್ಲಿ ಮೊಟ್ಟಮೊದಲ ಬಾರಿ ಟೆಂಡರ್ ಪದ್ಧತಿಯನ್ನು ಆರಂಭಿಸಿದರು ಎಂದು ಡಿ.ಆರ್. ಪಾಟೀಲ ತಿಳಿಸಿದರು.

# ಗ್ರಂಥಾಲಯ ಕಟ್ಟಡಕ್ಕಿಲ್ಲ ಉದ್ಘಾಟನೆಯ ಭಾಗ್ಯ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ಚಿಂಚಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೀಲಗುಂದ ಗ್ರಾಮದಲ್ಲಿ 20 ಲಕ್ಷ ರೂ ವೆಚ್ಚದಲ್ಲಿ ಕೆಆರ್‌ಐಡಿಎಲ್ ಅವರಿಂದ ನಿರ್ಮಾಣಗೊಂಡ ಗ್ರಂಥಾಲಯ ಕಟ್ಟಡಕ್ಕೆ ಇನ್ನೂ ಉದ್ಘಾಟನೆ ಭಾಗ್ಯ ಸಿಕ್ಕಿಲ್ಲ.

ಆಧುನಿಕತೆ ಬೆಳೆದಂತೆಲ್ಲಾ ಶಿಕ್ಷಣ ವ್ಯವಸ್ಥೆಯಲ್ಲಿ ಸಾಕಷ್ಟು ಬದಲಾವಣೆ ಕಂಡರೂ ಗ್ರಂಥಾಲಯದ ಮಹತ್ವ ಕಳೆದುಕೊಳ್ಳದೇ ಓದುವ ಅಭಿರುಚಿಯನ್ನು ಹೆಚ್ಚಿಸುತ್ತಾ ಹೋಗುತ್ತಿರುವುದು ಸಾಮಾನ್ಯವಾಗಿದೆ. ಗ್ರಾಮೀಣ ಭಾಗದ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿಯಾಗಲಿ ಎಂಬ ಸದುದ್ದೇಶದಿಂದ 2020ರಲ್ಲಿ ಇಂದಿನ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲರಿಂದ ಗ್ರಂಥಾಲಯ ಕಟ್ಟಡದ ಭೂಮಿ ಪೂಜೆ ನೆರವೇರಿತ್ತು. ಈ ಕಾಮಗಾರಿ ಕುಂಟುತ್ತಾ ಸಾಗಿ 2024ರಲ್ಲಿ ಕಾಮಗಾರಿ ಪೂರ್ಣಗೊಂಡಿತ್ತು.

ಚಿಂಚಲಿ ಗ್ರಾಮ ಪಂಚಾಯಿತಿಯಿಂದ ಸುಮಾರು 5 ಲಕ್ಷ ರೂಗಳಲ್ಲಿ ಗ್ರಂಥಾಲಯಕ್ಕೆ ಅಗತ್ಯವಿರುವ ಪುಸ್ತಕಗಳು, ಪೀಠೋಪಕರಣಗಳನ್ನು ನೀಡಿದ್ದರೂ ಸಹ ಸ್ಥಳೀಯ ನಾಯಕರಾಗಲಿ, ಜನಪ್ರತಿನಿಧಿಗಳಾಗಲಿ ಗ್ರಂಥಾಲಯ ಉದ್ಘಾಟನೆ ಮಾಡಿ ಸಾರ್ವಜನಿಕರಿಗೆ ನೀಡದೇ ಇರುವುದು ಪುಸ್ತಕ ಪ್ರೇಮಿಗಳಿಗೆ ಬೇಸರವನ್ನುಂಟುಮಾಡಿದೆ.

ಮುಖಂಡರಾದ ರವಿ ವಗ್ಗನವರ ಈಬಗ್ಗೆ ಬೇಸರ ವ್ಯಕ್ತಪಡಿಸಿ, ಗ್ರಂಥಾಲಯಗಳು ಅರಿವಿನ ಜ್ಞಾನದೀವಿಗೆಗಳು. ಇಷ್ಟಪಟ್ಟು ಓದಲು ಬರುವವರಿಗೆ, ಜ್ಞಾನದ ಹೊಸ ಹೊಳಪನ್ನು ನೀಡುವ ಅಕ್ಷರ ಭಂಡಾರಗಳಾಗಿದ್ದು, ಗ್ರಾಮೀಣ ಭಾಗದ ಮಕ್ಕಳ ಉತ್ತಮ ಭವಿಷ್ಯಕ್ಕೆ ಗ್ರಂಥಾಲಯದ ಅಗತ್ಯವಿದೆ. ಕೂಡಲೇ ಗ್ರಂಥಾಲಯ ಉದ್ಘಾಟಿಸಿ ಮಕ್ಕಳ ಭವಿಷ್ಯಕ್ಕೆ ಸಹಕರಿಸಬೇಕು ಎಂದರು.

ವಿದ್ಯಾರ್ಥಿನಿ ರಕ್ಷಿತಾ ನಾಯ್ಕರ್ ಮಾತನಾಡಿ, ನಮ್ಮೂರಲ್ಲಿ ಹಲವು ವರ್ಷಗಳ ನಂತರ ಒಂದು ಸುಂದರ ಗ್ರಂಥಾಲಯ ಕಟ್ಟಡ ನಿರ್ಮಾಣಗೊಂಡಿದೆ. ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧತೆ ಹಾಗೂ ಜ್ಞಾನದಾಹ ನೀಗಿಸುವ ಗ್ರಂಥಾಲಯ ಆದಷ್ಟು ಶೀಘ್ರ ಉದ್ಘಾಟನೆಗೊಳ್ಳಲಿ ಎಂದರು.



# ಹೋಳಿ ಸಂಭ್ರಮ ಹೆಚ್ಚಿಸಿದ ರಗ್ಗಲಿಗೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಹಿಂದೂ ಸಂಪ್ರದಾಯದ ವರ್ಷದ ಕೊನೆಯ ಹಬ್ಬವಾದ ಹೋಳಿ ಹುಣ್ಣಿಮೆಯನ್ನು ಇಲ್ಲಿಯ ಯುವಕರು ಮತ್ತು ಮಕ್ಕಳು ಸಂಭ್ರಮದಿಂದ ಆಚರಿಸಿದರು.

ಶುಕ್ರವಾರ ಬೆಳಿಗ್ಗೆ 8ಕ್ಕೆ ಆರಂಭವಾದ ಹೋಳಿ ಹಬ್ಬದ ಆಚರಣೆಯಲ್ಲಿ ಮಕ್ಕಳು ತಮ್ಮ ಸ್ನೇಹಿತರಿಗೆ ಪರಸ್ಪರ ಬಣ್ಣ ಹಾಕುವದರೊಂದಿಗೆ ಸಂಭ್ರಮಿಸಿದರು. ಗುರುವಾರ ರಾತ್ರಿಯೇ ವಿವಿಧ ಓಣಿಗಳಲ್ಲಿ ಪ್ರತಿಷ್ಠಾಪಿಸಲಾಗಿದ್ದ ಕಾಮ-ರತಿಯರಿಗೆ ವಿಧಿ ವಿಧಾನಗಳೊಂದಿಗೆ ಪೂಜೆ ಸಲ್ಲಿಸಿ ಹೋಳಿಗೆ ನೈವೇದ್ಯವನ್ನು ಅರ್ಪಿಸಲಾಯಿತು. ನಂತರ ಗಾಮದ ಪ್ರಮುಖ ಬೀದಿಗಳಲ್ಲಿ ಕಾಮ-ರತಿಯರನ್ನು ಗ್ರಾಮದೇವತೆ ಯುವಕ ಸಂಘದ ವತಿಯಿಂದ ಮೆರವಣಿಗೆ ಮಾಡಲಾಯಿತು. ಈ ಸಂದರ್ಭದಲ್ಲಿ ರಗ್ಗಲಿಗೆಗಳ ನಿನಾದ ಹೋಳಿ ಹುಣ್ಣಿಮೆ ಹಾಡಿನೊಂದಿಗೆ ಗಮನ ಸೆಳೆಯಿತು. ಕೆಲವು ಓಣಿಗಳಲ್ಲಿ ಮಹಿಳೆಯರು ಸಹ ಬಣ್ಣದ ಓಕುಳಿಯಲ್ಲಿ ಭಾಗವಹಿಸಿ ಸಂಭ್ರಮಿಸಿದರು.

ಇಲ್ಲಿಯ ಅಂಬೇಡ್ಕರ ನಗರದಲ್ಲಿ ಸಂಪ್ರದಾಯದಂತೆ ಸಗಣಿಯ ಕುಳ್ಳುಗಳನ್ನು ಸಂಗ್ರಹಿಸಿ ಕಾಮದಹನ ಕಾರ್ಯಕ್ರಮ ನೆರವೇರಿಸಲಾಯಿತು. ಈ ಅಗ್ನಿಯನ್ನು ತೆಗೆದುಕೊಂಡು ಹೋಗಿ ಗ್ರಾಮಚವಡಿ ಮುಂದೆ ಕಾಮನನ್ನು ದಹನ ಮಾಡಲಾಯಿತು. ನಂತರ ಮಧ್ಯಾಹ್ನದ ಹೊತ್ತಿಗೆ ವಿವಿಧ ಗಲ್ಲಿಗಳಲ್ಲಿ ಕಾಮದಹನ ಕಾರ್ಯಕ್ರಮ ನೆರವೇರಿತು. ಈ ಸಂದರ್ಭದಲ್ಲಿ ಕಾಮ-ರತಿಯರ ಚಾರಿತ್ರೆಯ ಕುರಿತ ಹಾಡುಗಳು ಮೊಳಗಿದವು.



## ಉಚಿತ ಟ್ಯೂಷನ್ ತರಗತಿ ಸಮಾರೋಪ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಎಲ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಕೊಡಿಸಲಾದ ಟ್ಯೂಷನ್ ಕ್ಲಾಸ್ ಸಮರೋಪ ಸಮಾರಂಭ ಶುಕ್ರವಾರ ಪು.ಬಡ್ನಿ ಗ್ರಾಮದಲ್ಲಿ ನೆರವೇರಿತು. ಧಗ್ರಾ ಯೋಜನೆಯ ಕಾರ್ಯಕ್ರಮಗಳ ಬಗ್ಗೆ ತಾಲೂಕಿನ ಕ್ಷೇತ್ರ ಯೋಜನಾಧಿಕಾರಿ ಪುನೀತ್ ಓಲೇಕಾರ ಮಾತನಾಡಿ, ಸಮುದಾಯವೃದ್ಧಿ ಕಾರ್ಯಕ್ರಮದಡಿಯಲ್ಲಿ ಶ್ರೀ ವಿರೇಂದ್ರ ಹಗ್ಗಡೆಯವರು ಶಿಕ್ಷಕರ ಕೊರತೆ ಇರುವ ಗ್ರಾಮೀಣ ಭಾಗದ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ರಾಜ್ಯಾದ್ಯಂತ ಈ ವರ್ಷ ಗೌರವ ಧನದ ಆಧಾರದ ಮೇಲೆ 1030 ಜನ ಶಿಕ್ಷಕರನ್ನು ನೇಮಿಸಿ ಆ ಮೂಲಕ ವಿದ್ಯಾರ್ಥಿಗಳಿಗೆ 3 ತಿಂಗಳ ಕಾಲ ಗಣಿತ, ವಿಜ್ಞಾನ, ಇಂಗ್ಲೀಷ್ ವಿಷಯಗಳ ಟ್ಯೂಷನ್ ಕೊಡಿಸಲಾಗುತ್ತಿದೆ. ಅದೇ ರೀತಿ ತಾಲೂಕಿನಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಕಲಿಕೆಯಲ್ಲಿ ಹಿನ್ನೆಡೆ ಇರುವ ವಿಷಯಗಳ ಬಗ್ಗೆ 3 ತಿಂಗಳು ಉಚಿತ ಟ್ಯೂಷನ್ ಕ್ಲಾಸ್‌ನ್ನು ಗ್ರಾಮ ಮಟ್ಟದ 5 ಶಾಲೆಯಲ್ಲಿ ನಡೆಸಲಾಗಿದೆ. ಟ್ಯೂಷನ್ ಮಾಡುವ ಶಿಕ್ಷಕರಿಗೆ ಗೌರವ ಧನವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನೀಡಲಾಗುತ್ತಿದೆ. ಅಲ್ಲದೇ ವೃತ್ತಿಪರ ಕೋರ್ಸ್ ಮಾಡುವ ಮಕ್ಕಳಿಗೆ ಸುಜ್ಞಾನ ನಿಧಿ ಶಿಷ್ಯವೇತನ್ನು ನೀಡುತ್ತಿದೆ ಎಂದು ತಿಳಿಸಿದರು.

ಗ್ರಾಮದ ಪರಮೇಶಪ್ಪ ಬಟಗುರ್ಕಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ವಿದ್ಯಾರ್ಥಿಗಳಿಗೆ ಟ್ಯೂಷನ್ ವ್ಯವಸ್ಥೆ ಇಲ್ಲದ್ದನ್ನು ಮನಗಂಡು ಧ.ಗ್ರಾ ಸಂಸ್ಥೆ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಷನ್ ಕೊಡಿಸಿರುವ ಕಾರ್ಯ ಶ್ಲಾಘನೀಯ. ಧ.ಗ್ರಾ ಸಂಸ್ಥೆ ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ ಸೇವಾ ಕಾರ್ಯದ ಮೂಲಕ ಜನಕಲ್ಯಾಣ ಮಾಡುತ್ತಿರುವುದು ಪ್ರಶಂಸನೀಯ ಎಂದರು. ಸ.ಚ ಹರದಗಟ್ಟಿ ಶಾಲೆಯ ಮುಖ್ಯೋಪಾಧ್ಯಾಯ ಹರ್ಷ, ಹೆಚ್.ಎಫ್. ನದಾಫ್, ಜೆ.ಆರ್. ಪಾಟೀಲ, ಆನಂದ ಮುಳುಗುಂದ, ಅಮರೇಶ ಚಲವಾದಿ, ಶಿವಲೀಲಾ ಮಂಚಾಲೆ, ಆಯುಷ್ಯ ಗುಡಾರದ, ಅನಸಮ್ಮ ಬೊಮ್ಮಳ್ಳಿ ದುದ್ದುಸಾಬ್ ಶೆಟ್ಟಿ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಮಮತಾ ಹಾಗೂ ಸೇವಾ ಪ್ರತಿನಿಧಿಗಳು ಉಪಸ್ಥಿರಿದ್ದರು.



# ರೇಣುಕಾಚಾರ್ಯರು ಮನುಕುಲದ ಉದ್ಧಾರಕರು

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮನುಕುಲದ ಕಲ್ಯಾಣಕ್ಕಾಗಿ ಹಲವು ಆಚಾರ್ಯರು, ಪ್ರವಾದಿಗಳು ಈ ಭೂವಿಯ ಮೇಲೆ ಅವತರಿಸಿ ಬಂದಿದ್ದಾರೆ. ಅಂತಹ ಪರಂಪರೆಯಲ್ಲಿ ಅವತರಿಸಿದ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಪರಶಿವನ ಆದೇಶದಂತೆ ಈ ಭೂತಲದಲ್ಲಿ ಶಕ್ತಿ ವಿಶಿಷ್ಟಾದ್ವೈತ ಸಿದ್ಧಾಂತವನ್ನು ಪ್ರಚುರಪಡಿಸಿ ವೀರಶೈವ ಧರ್ಮವನ್ನು ನೆಲೆಗೊಳಿಸಿದ್ದಾರೆ ಎಂದು ಶಂಕ್ರಯ್ಯ ಹಿರೇಮಠ ಹೇಳಿದರು.

ಇಲ್ಲಿಯ ಹಿರೇಮಠದಲ್ಲಿ ರೇಣುಕಾಚಾರ್ಯ ಮಂದಿರ ಜೀರ್ಣೋದ್ಧಾರ ಸೇವಾ ಸಮಿತಿಯ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ನೆರೆಯ ತೆಲಂಗಾಣ ರಾಜ್ಯದ ಕೊಲ್ಲಿಪಾಕಿ ಸ್ವಯಂಭೂ ಸೋಮೇಶ್ವರ ಲಿಂಗದಿಂದ ಅವತರಿಸಿದ ರೇಣುಕಾಚಾರ್ಯರು ಮಲಯಾಚಲಕ್ಕೆ ಬಂದು ಮಹಾಮುನಿ ಅಗಸ್ತ್ಯ ಶಿವಾದ್ವೈತ ಸಿದ್ಧಾಂತವನ್ನು ಬೋಧಿಸಿದ್ದಾರೆ. ಆ ಸಾರ ಸಂಗ್ರಹವೇ ಶ್ರೀ ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥವಾಗಿದೆ ಎಂದರು.

ಮುದಕಯ್ಯ ಪತ್ರಿಮಠ ಮಾತನಾಡಿ, ರೇಣುಕಾಚಾರ್ಯರು ಬೋಧಿಸಿರುವ ತತ್ವ ಸಿದ್ಧಾಂತಗಳು ಕೇವಲ ಬೋಧನೆಗೆ ಸೀಮಿತವಾಗದೇ ಸಮಾಜ ಸುಧಾರಣೆಗೆ ಸೋಪಾನವಾಗಿದೆ. ಕೊಲ್ಲಿಪಾಕಿಯಲ್ಲಿ 18 ಜಾತಿ - ಜನಾಂಗಗಳಿಗೂ ಮಠಗಳನ್ನು ಕಟ್ಟಿ, ಶಿಷ್ಯರನ್ನು ನೇಮಿಸಿ ಸಂಸ್ಕಾರ ನೀಡಿದ್ದು ರೇಣುಕಾಚಾರ್ಯರ ಸಮಾಜಿಕ ಕ್ರಾಂತಿಯ ಮೊದಲ ಹೆಜ್ಜೆಯಾಗಿದೆ. ಆ 18 ಮಠಗಳ ಕುರುಹು ಇಂದಿಗೂ ಕೊಲ್ಲಿಪಾಕಿ ಕ್ಷೇತ್ರದಲ್ಲಿವೆ ಎಂದರು. ರೇಣುಕಾಚಾರ್ಯ ಮಹಾ ಮೂರ್ತಿಗೆ ಕೆ.ಸಿ. ಹಿರೇಮಠ ಅವರ ನೇತೃತ್ವದಲ್ಲಿ ವಿಧಿ ವಿಧಾನಗಳೊಂದಿಗೆ ಮಹಾರುದ್ರಾಭಿಷೇಕ, ಸಹಸ್ರ ನಾಮಾವಳಿ, ಮಹಾಮಂಗಳಾರತಿ ಕಾರ್ಯಕ್ರಮಗಳು ನಡೆದವು. ತೋಟಯ್ಯ ಕಳ್ಳಿಮಠ, ರೇವಣಸಿದ್ದಯ್ಯ ನರಗುಂದಮಠ, ಕೊಟ್ರಯ್ಯ ಪತ್ರಿಮಠ, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ, ಅಂದಾನಯ್ಯ ಪತ್ರಿಮಠ, ಚನ್ನವೀರಯ್ಯ ಪತ್ರಿಮಠ, ಬೂದಯ್ಯ ಕುಲಕರ್ಣಿ, ಷಡಕ್ಷರಯ್ಯ ಮುಳಕೊಂಪಿಮಠ, ಕೊಟ್ರಯ್ಯ ಮುಘಂಡಮಠ ಉಪಸ್ಥಿತರಿದ್ದರು.



# ಎನ್‌ಎಸ್‌ಎಸ್ ವ್ಯಕ್ತಿಯ ಜವಾಬ್ದಾರಿಯನ್ನು ಹೆಚ್ಚಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತಮ್ಮ ಕಾಲೇಜು ಜೀವನದಲ್ಲಿ ಯಾರು ಎನ್‌ಎಸ್‌ಎಸ್ ಯೋಜನೆಯಲ್ಲಿ ಶಿಬಿರಾರ್ಥಿಗಳಾಗಿರುತ್ತಾರೋ ಅವರು ಜೀವನದಲ್ಲಿ ಏನನ್ನಾದರೂ ಸಾಧಿಸಲು ಶಕ್ತರಾಗುತ್ತಾರೆ. ಎನ್‌ಎಸ್‌ಎಸ್ ವ್ಯಕ್ತಿಯ ಜವಾಬ್ದಾರಿಯನ್ನು ಹೆಚ್ಚಿಸುತ್ತದೆ ಎಂದು ರೋಣ ಹಿರಿಯ ಶ್ರೇಣಿ ನ್ಯಾಯಾಧೀಶ ಎಸ್. ಚಿನ್ನಸ್ವಾಮಿ ಹೇಳಿದರು.

ಸಮೀಪದ ಹಾಲಕೆರೆ ಗ್ರಾಮದ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದಲ್ಲಿ ಪ್ರಾರಂಭವಾದ ಎಸ್.ಎ. ಪದವಿ ಕಾಲೇಜಿನ ವಿಶೇಷ ವಾರ್ಷಿಕ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಹರಗಳಿಗಿಂತ ಗ್ರಾಮೀಣ ಪ್ರದೇಶಗಳಿಗೆ ಈ ಯೋಜನೆ ಹೆಚ್ಚು ಉಪಯುಕ್ತವಾಗಿದೆ. ಇಲ್ಲಿ ಗ್ರಾಮೀಣ ಪ್ರದೇಶದ ಅನೇಕ ಸಮಸ್ಯೆಗಳಿಗೆ ಪರಿಹಾರ ನೀಡಲು ಸಾಧ್ಯವಿದೆ. ವ್ಯಕ್ತಿಯ ಬೌದ್ಧಿಕಶಕ್ತಿ ಮತ್ತು ವೈಯಕ್ತಿಕ ಬೆಳವಣಿಗೆಗೆ ಎನ್‌ಎಸ್‌ಎಸ್ ಸಹಕಾರಿಯಾಗಿದೆ. ಆದ್ದರಿಂದ ಎನ್‌ಎಸ್‌ಎಸ್ ಶಿಬಿರಾರ್ಥಿಗಳು ಭವಿಷ್ಯದಲ್ಲಿ ಯಾವುದೇ ಹುದ್ದೆಯನ್ನು ನಿಭಾಯಿಸುವಲ್ಲಿ ಸಮರ್ಥರಾಗಿರುತ್ತಾರೆ ಎಂದು ಹೇಳಿದರು.

ಕನ್ನಡ ಮಾಧ್ಯಮದಲ್ಲಿ ಓದಿದವರು ಜಗತ್ತಿನಲ್ಲಿ ಬೇಕಾದದ್ದನ್ನು ಸಾಧಿಸಿದ್ದಾರೆ. ಪದವಿಯಲ್ಲಿ ಓದುತ್ತಿರುವ ನೀವುಗಳು ಕಾನೂನುಗಳ ಬಗ್ಗೆಯೂ ಒಂದಿಷ್ಟು ಮಾಹಿತಿಯನ್ನು ಪಡೆದುಕೊಂಡಿರಬೇಕು. ಮುಂದೆ ಸಾಧ್ಯವಾದರೆ ನೀವುಗಳೂ ಸಹ ಕಾನೂನು ಪದವಿಯನ್ನು ಪಡೆದುಕೊಳ್ಳಲು ಮುಂದಾಗಬೇಕು. ಈಗ ಕಾನೂನು ಮಹಾವಿದ್ಯಾಲಯಗಳಲ್ಲಿಯೂ ಕ್ಯಾಂಪಸ್ ಆಯ್ಕೆಯ ಅವಕಾಶ ಇದೆ ಎಂದು ಚಿನ್ನಸ್ವಾಮಿ ತಿಳಿಸಿದರು.

ಕಾಲೇಜು ಆಡಳಿತ ಮಂಡಳಿಯ ಸದಸ್ಯ ಸೋಮಣ್ಣ ಹರ್ಲಾಪೂರ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ರೋಣ ವಕೀಲರ ಸಂಘದ ಅಧ್ಯಕ್ಷ ಎ.ಎಸ್. ಅರಹುಣಸಿ, ನ್ಯಾಯವಾದಿಗಳಾದ ಎಲ್.ಎನ್. ಬಾಣದ, ಸಿ.ಬಿ. ಕೊಪ್ಪದ, ಬಿ.ವಿ. ನೀರಲೋಟಿ, ವೀರಣ್ಣ ಹಳ್ಳಿ, ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಇದ್ದರು. ಕಾರ್ಯಕ್ರಮಾಧಿಕಾರಿ ಡಾ. ಕಲ್ಲಯ್ಯ ಹಿರೇಮಠ ಮತ್ತು ಪುಂಡಲೀಕ ಎಚ್.ಎಂ. ನಿರ್ವಹಿಸಿದರು.



## ಸಿಟಿ ಯುನಿಯನ್ ಬ್ಯಾಂಕ್ ಶಾಖೆ ಪ್ರಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕಳೆದ 121 ವರ್ಷಗಳಿಂದ 849 ಶಾಖೆಗಳೊಂದಿಗೆ ಗ್ರಾಹಕರ ಸೇವೆಯಲ್ಲಿ ತನ್ನನ್ನು ಸಮರ್ಪಿಸಿಕೊಂಡಿರುವ ಸಿಟಿ ಯುನಿಯನ್ ಬ್ಯಾಂಕ್ (ಕಬ್) ಇದೀಗ ಗದಗ ಜಿಲ್ಲೆಯನ್ನು ಪ್ರವೇಶಿಸಿದ್ದು, ಗದಗ ನಗರದ ನಾಮಜೋಷಿ ರೋಡ್‌ನಲ್ಲಿ ತನ್ನ ಪ್ರಥಮ ಶಾಖೆಯನ್ನು ಶುಕ್ರವಾರ ಶುಭಾರಂಭಗೊಳಿಸಿತು.

ಗಣ್ಯ ಉದ್ಯಮಿ, ಕರ್ನಾಟಕ ಚೇಂಬರ್ ಆಫ್ ಕಾಮರ್ಸ್ ಆ್ಯಂಡ್ ಇಂಡಸ್ಟ್ರೀಸ್‌ನ ಅಧ್ಯಕ್ಷ ಎಸ್.ಪಿ. ಸಂಶಿಮಠ ಜ್ಯೋತಿ ಬೆಳಗಿಸುವ ಮೂಲಕ ಗದಗ ಶಾಖೆಯನ್ನು ಉದ್ಘಾಟಿಸಿ, ಗ್ರಾಹಕರ ಬೇಡಿಕೆಗಳನ್ನು ಈಡೇರಿಸುವಲ್ಲಿ ಈ ಬ್ಯಾಂಕ್ ಮುಂದಾಗಲಿ. ಸ್ವಾತಂತ್ರ್ಯ ಪೂರ್ವದಲ್ಲಿಯೇ ಬ್ಯಾಂಕ್ ಸ್ಥಾಪನೆಗೊಂಡಿರುವದು ಹೆಮ್ಮೆಯ ಸಂಗತಿ ಎಂದರು.

ಎಟಿಎಂ ಮಷಿನ್ ಉದ್ಘಾಟಿಸಿ ಮಾತನಾಡಿದ ಗದುಗಿನ ಆರ್ಬಾದ್ ಕೋ-ಆಪ್ ಬ್ಯಾಂಕ್‌ನ ಚೇರಮನ್ ಸರ್ಫರಾಜಅಹ್ಮದ್ ಉಮಚಗಿ ನಗರ ಮತ್ತು ನಾಗರೀಕತೆ ಹೆಚ್ಚಿದಂತೆ ಗ್ರಾಹಕರ ಬೇಕು-ಬೇಡಿಕೆಗಳನ್ನು ಈಡೇರಿಸುವಲ್ಲಿ ಬ್ಯಾಂಕುಗಳು ಮುಂದಾಗಿವೆ. ಬ್ಯಾಂಕುಗಳು ಗ್ರಾಹಕರ ವಿಶ್ವಾಸವನ್ನು ಪಡೆದುಕೊಂಡಲ್ಲಿ ಪ್ರಗತಿ ಸಾಧ್ಯ ಎಂದರು.

ಬ್ಯಾಂಕ್‌ನ ವಿಭಾಗೀಯ ವ್ಯವಸ್ಥಾಪಕ ಕೆ.ಗಣೇಶ ಶೆಣೈ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರ್ವರನ್ನು ಸ್ವಾಗತಿಸಿ ಮಾತನಾಡಿದ ಶಾಖಾ ವ್ಯವಸ್ಥಾಪಕ ಆರ್. ಭರತ್‌ರಾಮ್, ಬ್ಯಾಂಕ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಓ ಡಾ.ಎನ್. ಕಾಮಕೋಡಿ ಅವರ ಮಾರ್ಗದರ್ಶನದಲ್ಲಿ ಗದುಗಿನಲ್ಲಿ ಈ ಶಾಖೆಯನ್ನು ತೆರೆಯಲಾಗಿದೆ ಎಂದರು.

ಸಮಾರಂಭದಲ್ಲಿ ಗಣ್ಯ ವ್ಯಾಪಾರಸ್ಥರು, ಗ್ರಾಹಕರು ಹಾಗೂ ಬ್ಯಾಂಕ್ ಸಿಬ್ಬಂದಿಯವರಿದ್ದರು.



▶▶ ಮೊದಲನೇ ಪುಟದಿಂದ

# ಸರಕಾರಿ ನೌಕರರ ಆಶಾಕಿರಣ ಸಿ.ಎಸ್. ಷಡಕ್ಷರಿ





### ವೃಂದ ಸಂಘಗಳ ಸಮಸ್ಯೆಗೆ ಸ್ಪಂದನೆ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘಟನೆ ಎನ್ನುವುದು ಹಲವು ವೃಂದ ಸಂಘಟನೆಗಳ ಮಾತೃ ಸಂಸ್ಥೆ. ಶಿಕ್ಷಣ, ಗ್ರಾಮೀಣಾಭಿವೃದ್ಧಿ, ಆರೋಗ್ಯ ಮತ್ತು ಕಂದಾಯ ಇಲಾಖೆಯಲ್ಲಿ ದೊಡ್ಡ ವೃಂದ ಸಂಘಗಳಿವೆ. ಸುಮಾರು 70 ವೃಂದ ಸಂಘಗಳು ಸೇರಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘಟನೆಯಾಗಿದೆ. ಆ ಎಲ್ಲ ವೃಂದ ಸಂಘದ ಸಮಸ್ಯೆಗಳಿಗೆ ಮಾತೃ ಸಂಘ ಸ್ಪಂದಿಸಿದೆ. ವಿಶೇಷವಾಗಿ ಇತ್ತೀಚಗೆ ಕಂದಾಯ ಇಲಾಖೆ ನೌಕರರು ಮುಷ್ಕರಕ್ಕೆ ಇಳಿದಿದ್ದರು. ಅವರ ಪರವಾಗಿ ಸರಕಾರಿ ನೌಕರರ ಸಂಘ ಧ್ವನಿ ಎತ್ತಿದ ಪರಿಣಾಮ, ಸರಕಾರದ ಮುಖ್ಯ ಕಾರ್ಯದರ್ಶಿಗಳ ಸಮ್ಮುಖದಲ್ಲಿ ಸಂಧಾನ ನಡೆದಿದ್ದು, ಸಂಘದ ಶಕ್ತಿಯ ಉದಾಹರಣೆಯಾಗಿದೆ ಎಂದು ಗುಂಜೀಕರ್ ತಿಳಿಸಿದರು.

ಹೀಗಾಗಿ ಸರಕಾರಿ ನೌಕರರಿಗೆ ಕಡಿಮೆ ಬೆಲೆಯಲ್ಲಿ ನಿವೇಶನ ಸಿಗಬೇಕು. ಸರಕಾರಿ ನೌಕರರ ಪತ್ತಿನ ಸಹಕಾರಿ ಸಂಘದಲ್ಲಿ ಸಾಲ ಪಡೆದು ಸೂರು ಕಟ್ಟಿಕೊಳ್ಳಬೇಕು ಎನ್ನುವ ಸಂಕಲ್ಪದೊಂದಿಗೆ ಈ ಎರಡು ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ಎನ್ನುತ್ತಾರೆ ಡಾ. ರವಿ ಗುಂಜೀಕರ್.

ಸರಕಾರಿ ನೌಕರರ ಪತ್ತಿನ ಸಹಕಾರಿ ಸಂಘ ಮತ್ತು ಹೌಸಿಂಗ್ ಸೊಸೈಟಿ ಸ್ಥಾಪನೆಗೆ ಅವಶ್ಯವಿರುವ ನೋಂದಣಿ, ಪರವಾನಗಿ ಸಹಿತ ಎಲ್ಲ ರೀತಿಯ ಸಿದ್ಧತೆಗಳು ಪೂರ್ಣಗೊಂಡಿವೆ. ಎಪ್ರಿಲ್ ಮೊದಲ ವಾರದಲ್ಲಿಯೇ ಪತ್ತಿನ ಸಹಕಾರಿ ಸಂಘಕ್ಕೆ ಚಾಲನೆ ನೀಡುವ ಚಿಂತನೆ ಇದೆ. ಅದೇ ರೀತಿ ಹೌಸಿಂಗ್ ಸೊಸೈಟಿಯನ್ನೂ ಆದಷ್ಟು ಬೇಗ ಕಾರ್ಯಗತಗೊಳಿಸಿ,

ಜಿಲ್ಲೆಯ ಸರಕಾರಿ ನೌಕರರಿಗೆ ಅನುಕೂಲ ಕಲ್ಪಿಸುವ ಕಾರ್ಯ ಕೈಗೊಳ್ಳಲಾಗುವುದು ಎಂದು ಡಾ. ರವಿ ಗುಂಜೀಕರ್ ಭರವಸೆ ವ್ಯಕ್ತಪಡಿಸಿದರು.



### 2019-2024ರ ವರೆಗೆ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಸಾಧನೆಗಳು

1. ಅನಾಮಧೇಯ ದೂರುಗಳಿಗೆ ತನಿಖೆ ಅಗತ್ಯವಿಲ್ಲ ಎಂದು ಸರಕಾರ ಆದೇಶ ಮಾಡಿರುವುದು
2. ಸರಕಾರಿ ನೌಕರರಿಗೆ ಡಯಾಲಿಸಿಸ್ ಚಿಕಿತ್ಸೆಗಾಗಿ 6 ತಿಂಗಳ ವಿಶೇಷ ಸಾಂದರ್ಭಿಕ ರಜೆ.
3. ಕ್ಯಾನ್ಸರ್ ಚಿಕಿತ್ಸೆಗಾಗಿ 6 ತಿಂಗಳ ಸಾಂದರ್ಭಿಕ ರಜೆ
4. 4ನೇ ಶನಿವಾರ ಅನ್ವಯಿಸದ ಸರಕಾರಿ ನೌಕರರಿಗಿದ್ದ 10 ದಿನಗಳ ಸಾಂದರ್ಭಿಕ ರಜೆ 15 ದಿನಗಳಿಗೆ ಏರಿಕೆ
5. ಮಹಿಳಾ ನೌಕರರು ತಮ್ಮ ಮಕ್ಕಳ ಆರೈಕೆಗಾಗಿ 6 ತಿಂಗಳ ಶಿಶುಪಾಲನಾ ಆದೇಶ
6. ಹಬ್ಬದ ಮುಂಗಡ ಮೊತ್ತವನ್ನು 10 ಸಾವಿರದಿಂದ 25 ಸಾವಿರಕ್ಕೆ ಏರಿಕೆ
7. ಪ್ರತಿ ವರ್ಷ ಏಪ್ರಿಲ್ 21ರಂದು ರಾಜ್ಯ ಸರಕಾರಿ ನೌಕರರ ದಿನಾಚರಣೆ
8. ನೌಕರರ ಕುಂದುಕೊರತೆ ಆಲಿಸಲು ಜೆಸಿಎಮ್ ಸಮಿತಿ ರಚನೆ
9. ಜಿಲ್ಲಾ, ತಾಲೂಕು ಘಟಕದ ಅಧ್ಯಕ್ಷರಿಗೆ ಸರಕಾರದ ಅಧಿಕೃತ ಸಭೆಯಲ್ಲಿ ಭಾಗವಹಿಸಲು ಅವಕಾಶ
10. ಹಲವಾರು ಇಲಾಖೆಗಳಲ್ಲಿ ವೃಂದ ನೇಮಕಾತಿಗೆ ನಿಯಮಗಳ ತಿದ್ದುಪಡಿ
11. ಪ್ರತಿ ವರ್ಷ ಸರಕಾರಿ ನೌಕರರ ಕ್ರೀಡಾಕೂಟ
12. ಸರಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ
13. ಸರಕಾರಿ ನೌಕರರಿಗೆ ಹೆಚ್ಚು ಮುಂಬಡ್ತಿಗೆ ಅವಕಾಶ
14. ನೌಕರರ ಅವಲಂಬಿತರಿಗೆ ನಗದು ರಹಿತ ಉಚಿತ ಚಿಕಿತ್ಸೆ ನೀಡುವ ಕರ್ನಾಟಕ ಆರೋಗ್ಯ ಸಂಜೀವಿನಿ ಆದೇಶ
15. ಕೋವಿಡ್ ನಲ್ಲಿ ಮೃತಪಟ್ಟ ನೌಕರರಿಗೆ 30 ಲಕ್ಷ ವಿಮೆ ಪರಿಹಾರ ಮಂಜೂರಾತಿ
16. ಇಲಾಖಾ ವಿಚಾರಣೆಯನ್ನು ಕಾಲಮಿತಿಯಲ್ಲಿ ಇತ್ಯರ್ಥಪಡಿಸಲು ಇಲಾಖಾ ವಿಚಾರಣೆ ಅದಾಲತ್
17. ಜಿಲ್ಲಾ ಮಟ್ಟದ ಸರ್ವೋತ್ತಮ ಪ್ರಶಸ್ತಿ ಸಂಖ್ಯೆ ಹೆಚ್ಚಳ
18. ಅವಧಿ ಪೂರ್ವದಲ್ಲಿಯೇ ವೇತನ ಆಯೋಗ ರಚನೆ
19. ಪ್ರಭಾರ ಭತ್ಯೆಯನ್ನು ಶೇ. 15ಕ್ಕೆ ಏರಿಕೆ
20. ನೌಕರರ ಸೇವಾ ವಿವರವನ್ನು ಇ-ಎಸ್ ಆರ್ ಮೂಲಕ ನಿರ್ವಹಣೆ
21. ಡಿಪ್ಲೋಮಾ ವಿದ್ಯಾರ್ಹತೆಯನ್ನು ಪಿಯುಸಿಗೆ ತತ್ಸಮಾನವೆಂದು ಪರಿಗಣಿಸಿ ಆದೇಶ
22. ಕೋವಿಡ್ ಸಂದರ್ಭದಲ್ಲಿ ತಡೆಹಿಡಿದಿದ್ದ ಗಳಿಕೆ ರಜೆ ನದೀಕರಣ ಪಡೆಯುಲ ಸೌಲಭ್ಯ
23. ನೌಕರರಿಗೆ ಪಾಸ್ ಪೋರ್ಟ್ ನಿರಪೇಕ್ಷಣಾ ಪತ್ರ ನೀಡುವ ಅಧಿಕಾರವನ್ನು ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಿ ಆದೇಶ
24. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ 5 ಸಾವಿರ ಪ್ರೋತ್ಸಾಹ ಧನ
25. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ಉತ್ತೀರ್ಣರಾಗುವ ಅವಧಿಯನ್ನು ವಿಸ್ತರಣೆ
26. ರಾಜ್ಯದ ಸುಮಾರು 11300 ಎನ್ ಪಿಎಸ್ ನೌಕರರಿಗೆ ಓಪಿಎಸ್ ಜಾರಿ ಮಾಡಿ ಆದೇಶ
27. ಮರಣ ಹೊಂದಿದ ಎನ್ ಪಿಎಸ್ ನೌಕರರಿಗೆ ಡಿಸಿಆರ್ ಜಿ/ ಕುಟುಂಬ ಪಿಂಚಣಿ ಮಂಜೂರು ಮಾಡಿ ಆದೇಶ
28. ಮರಣ ಹೊಂದಿದ ನೌಕರರಿಗೆ ಶವಸಂಸ್ಕಾರ ವೆಚ್ಚವನ್ನು 5 ಸಾವಿರದಿಂದ 15 ಸಾವಿರಕ್ಕೆ ಏರಿಕೆ
29. ರಾಜ್ಯ ಸರಕಾರಿ ನೌಕರರಿಗೆ 1-4-2023ರಿಂದ ಅನ್ವಯವಾಗುವಂತೆ ಶೇ. 17ರಷ್ಟು ಮಧ್ಯಂತರ ಪರಿಹಾರ ಮಂಜೂರಾತಿ
30. ಹಳೆ ಪಿಂಚಣಿ ಯೋಜನೆ ಅನುಷ್ಠಾನಕ್ಕಾಗಿ ಸರಕಾರಿ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ರಚನೆ.

# ರಂಗಿನೋಕುಳಿಯಲ್ಲಿ ಮಿಂದೆದ್ದ ಗ್ರಾಮೀಣ ಜನತೆ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಲ್ಲಿನ ಅಡರಕಟ್ಟಿ, ಹರದಗಟ್ಟಿ, ಮಂಜಲಾಪೂರ, ಸುವರ್ಣಗಿರಿ ತಾಂಡೆ, ಬಟ್ಟೂರ, ರಾಮಗೇರಿ, ಬಾಲೆಹೊಸೂರ, ಯಳವತ್ತಿ, ದೊಡ್ಡೂರ ಸೇರಿ ತಾಲೂಕಿನ 23 ಗ್ರಾಮಗಳಲ್ಲಿ ಹೋಳಿ ಹುಣ್ಣಿಮೆ ಪ್ರಯುಕ್ತ ಯುವಕರು, ಮಕ್ಕಳು ಪರಸ್ಪರ ಬಣ್ಣ ಎರಚಿ ರಂಗಿನೋಕುಳಿಯಲ್ಲಿ ಮಿಂದೆದ್ದರು.

ಬೆಳ್ಳಂಬೆಳಿಗ್ಗೆ ಮಕ್ಕಳು ಹೆಣ್ಣು-ಗಂಡು ಬೇಧಬಾವವಿಲ್ಲದೇ ಬಣ್ಣದ ನೀರು ತುಂಬಿದ್ದ ಪಿಚಕಾರಿ ಮತ್ತು ಪ್ಲಾಸ್ಟಿಕ್ ಬಾಟಲಿಗಳನ್ನು ಹಿಡಿದು ಪರಸ್ಪರ ಬಣ್ಣ ಎರಚಿ ಖುಷಿಪಟ್ಟರು. ಸುಡುಬಿಸಿಲು ಲೆಕ್ಕಿಸದೇ ಹಲವೆಡೆ ಅಣುಕು ಶವಯಾತ್ರೆ ನಡೆಸಿದ್ದಷ್ಟೇ ಅಲ್ಲದೆ, ಆಕರ್ಷಕ ಉಡುಗೆ ತೊಟ್ಟು ಹಲಗೆಯ ತಾಳಕ್ಕೆ ತಕ್ಕಂತೆ ಕುಣಿದರು. ಓಕುಳಿ ಬಳಿಕ ಕಾಮದಹನದ ಸಂಪ್ರದಾಯ ನೆರವೇರಿಸಲಾಯಿತು. ಎಸ್‌ಎಸ್‌ಎಲ್‌ಸಿ ಮತ್ತು ಬೋರ್ಡ್ ಪರೀಕ್ಷೆಗೆ ಯಾವುದೇ ತೊಂದ-ರೆಯಾಗದಂತೆ ಹಬ್ಬದ ಆಚರಣೆ ನೆರವೇರಿತು.

ಮಾ.26ರಂದು ತಾಲೂಕಿನ ಸೂರಣಗಿ, ಗೊಜನೂರ, ಪು. ಬಡ್ನಿ, ಸೋಗಿವಾಳ ಗ್ರಾಮದಲ್ಲಿ ಮತ್ತು ಮಾ.29ರಂದು ಶಿಗ್ಲಿ ಗ್ರಾಮದಲ್ಲಿ ಹೋಳಿ ಆಚರಣೆ ನಡೆಯಲಿದೆ.

ಲಕ್ಷ್ಮೇಶ್ವರ ಪಟ್ಟಣದಲ್ಲಿ ಮಾ.29ರಂದು ಶುಕ್ರವಾರ ಸಂತೆ ದಿನವಾಗಿದ್ದರಿಂದ ಗ್ರಾಮೀಣ ಪ್ರದೇಶಗಳಿಂದ ಬರುವ ಜನತೆಗೆ, ವ್ಯಾಪಾರ-ವಹಿವಾಟಿಗೆ ತೊಂದರೆಯಾಗಬಾರದೆಂದು ಮಾ.30ರ ಶನಿವಾರ ರಂಗಪಂಚಮಿ ಆಚರಿಸಲು ನಿರ್ಧರಿಸಲಾಗಿದೆ. ಬಿಸಿಲಿನ ಪ್ರಮಾಣ ಹೆಚ್ಚಿರುವುದರಿಂದ ಬೆಳಿಗ್ಗೆ 8ರಿಂದ ಮಧ್ಯಾಹ್ನ 12 ಗಂಟೆಯೊಳಗೆ ಹಬ್ಬದ ಆಚರಣೆ ಪೂರ್ಣಗೊಳಿಸಿ ಆರೋಗ್ಯ ಕಾಪಾಡಿಕೊಳ್ಳಿ. ಅಲ್ಲದೇ ಕುಡಿಯುವ ನೀರಿನ ಸಮಸ್ಯೆ ಇರುವುದರಿಂದ ನೀರನ್ನು ಹಿತಮಿತವಾಗಿ ಬಳಸಲು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮನವಿ ಮಾಡಿದ್ದಾರೆ.

# ಶಾಂತಿಯುತ ಹೋಳಿ ಹಬ್ಬ ಆಚರಣೆ



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಗುರುವಾರ ಮಧ್ಯರಾತ್ರಿಯಿಂದಲೇ ಶಿರಹಟ್ಟಿ ಪಟ್ಟಣದಲ್ಲಿ ಹೋಳಿ ಹಬ್ಬದ ನಿಮಿತ್ತ ಬೃಹತ್ ಹುಲ್ಲಗಾಮನ ಭವ್ಯ ಮೆರವಣಿಗೆ, ಶುಕ್ರವಾರ ಓಕುಳಿ ಹಬ್ಬವು ಸಂಭ್ರಮದಿಂದ ಪೊಲೀಸ್ ಬಿಗಿ ಬಂದೋಬಸ್ತ್ ನಡುವೆ ಶಾಂತಿಯುತವಾಗಿ ಆಚರಣೆ ಮಾಡಲಾಯಿತು.

ಗುರುವಾರ ರಾತ್ರಿ 11 ಗಂಟೆ ಸುಮಾರಿಗೆ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಿಂದ ಹುಲ್ಲಿನಿಂದ ತಯಾರಿಸಿದ ಬೃಹತ್ ಹುಲ್ಲಗಾಮನ ಮೆರವಣಿಗೆಯು ಅಲಂಕೃತ ಎತ್ತಿನ ಬಂಡಿಯಲ್ಲಿ ಸಾವಿರಾರು ಯುವಕರ ಹಲಗೆಗಳ ಝೇಂಕಾರದ ಮಧ್ಯೆ ಬಡಿಗೇರಿ ಓಣಿ, ಕೆಳಗೇರಿ ಓಣಿ, ಶೆಟ್ಟರ ಓಣಿ, ಬಜಾರ ರಸ್ತೆ, ಮರಾಠಾ ಗಲ್ಲಿ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಶುಕ್ರವಾರ ಬೆಳಗಿನ ಜಾವದವರೆಗೂ ಸಂಚರಿಸಿತು. ಪುನಃ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತಕ್ಕೆ ತಲುಪಿ ಹುಲ್ಲಗಾಮನನ್ನು ದಹಿಸಿ, ನಂತರ ಓಕುಳಿಗೆ ಚಾಲನೆ ನೀಡಲಾಯಿತು. ಇದೇ ವೃತ್ತದಿಂದ ಎತ್ತಿನ ಬಂಡಿಯ ಸಮೇತ ಓಕುಳಿಯ ಮೆರವಣಿಗೆಯು ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕೊನೆಗೆ ವಾಲ್ಮೀಕಿ ವೃತ್ತಕ್ಕೆ ಆಗಮಿಸಿ ವಿದಾಯ ಹೇಳಲಾಯಿತು.

ಈ ಸಂದರ್ಭದಲ್ಲಿ ಯುವಕರು ಹುಚ್ಚೆದ್ದು ಹಲಗೆಗಳನ್ನು ಬಡಿಯುತ್ತಾ, ಬಾಯಿ ಬಾಯಿ ಬಡಿದುಕೊಳ್ಳುತ್ತಾ, ಅಣಕು ಶವಯಾತ್ರೆಯನ್ನು ನಡೆಸಿ, ತಮ್ಮ ಸ್ನೇಹಿತರಿಗೆ ಪರಸ್ಪರ ಬಣ್ಣವನ್ನು ಹಚ್ಚಿ ಹಬ್ಬವನ್ನು ಆಚರಿಸಿದರು. ಮುಂಜಾಗೃತಾ ಕ್ರಮವಾಗಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ನಿರ್ದೇಶನದಂತೆ ಸಿಪಿಐ ನಾಗರಾಜ ಮಾಡಳ್ಳಿ, ಶಿರಹಟ್ಟಿ ಪಿಎಸ್‌ಐ ಚನ್ನಯ್ಯ ದೇವೂರ, ಲಕ್ಷ್ಮೇಶ್ವರ ಪಿಎಸ್‌ಐ ನಾಗರಾಜ ಗಡಾದ, ಪೊಲೀಸ್ ಸಿಬ್ಬಂದಿಗಳು, ಹೋಮ್‌ಗಾರ್ಡ್ಸ್ ಮತ್ತು ಡಿಎಆರ್ ತುಕಡಿ ಸೇರಿದಂತೆ ಆಯಕಟ್ಟಿನ ಸ್ಥಳಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಂಡಿದ್ದರು.

### ಜಿಮ್ಸ್ ನರ್ಸಿಂಗ್ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಯುವದಿನಾಚರಣೆ, ಪ್ರಶಸ್ತಿ ಪ್ರದಾನ ಕಾರ್ಯಕ್ರಮ

# ಯುವಜನತೆ ಉತ್ತಮ ಸಂಪನ್ಮೂಲ ವ್ಯಕ್ತಿಗಳಾಗಲಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಾಗತಿಕವಾಗಿ ಹದಿಹರೆಯದ ವಿದ್ಯಾರ್ಥಿಗಳು ಪರಸ್ಪರ ಆಕರ್ಷಣೆಯಿಂದ ಹಾಗೂ ಅನೇಕ ದುಶ್ಚಟಗಳಿಗೆ ಬಲಿಯಾಗಿ ತಮ್ಮ ಯೌವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಯೌವನವನ್ನು ಸದುಪಯೋಗಪಡಿಸಿಕೊಳ್ಳಲು ಮಾನಸಿಕ, ದೈಹಿಕ, ಸಾಮಾಜಿಕ ಆರೋಗ್ಯದ ಹಿತಕ್ಕಾಗಿ ಸಮಾಜದಲ್ಲಿ ಒಳ್ಳೆಯ ಸಂಪನ್ಮೂಲ ವ್ಯಕ್ತಿಗಳಾಗಿ ಬೆಳೆಯಬೇಕೆಂದು ಡಾ. ಅರುಂಧತಿ ಕೆ ಕಿವಿಮಾತು ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಮ್ಸ್ ನರ್ಸಿಂಗ್ ಮಹಾವಿದ್ಯಾಲಯ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ರಾಷ್ಟ್ರೀಯ ಯುವ ದಿನಾಚರಣೆ ಮತ್ತು ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಇಂದಿನ ಯುವಕರು ಸಧೃಢ ಆರೋಗ್ಯವನ್ನು ಹೊಂದಿ, ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಬೇಕು. ಇಂದಿನ ಯುವ ಜನಾಂಗದಲ್ಲಿ ಸಾಮಾಜಿಕ ಮೌಲ್ಯಗಳು ಹಾಗೂ ನೈತಿಕತೆ ಇಲ್ಲದಾಗಿದ್ದು, ಗುರು ಹಿರಿಯರು, ತಂದೆ-ತಾಯಿ ಎನ್ನುವ ಗೌರವವಿಲ್ಲದೆ ಆಧುನಿಕ ಮಾಧ್ಯಮ-ತಂತ್ರಜ್ಞಾನಕ್ಕೆ ಮಾರು ಹೋಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ನಮ್ಮ ದೇಶದಲ್ಲಿ ಶೇ. 30ಕ್ಕಿಂತ ಹೆಚ್ಚು ಯುವಜನತೆ ಇದ್ದು, ಇವರೆಲ್ಲರೂ ಭಾವೀ ಭಾರತದ ಜವಾಬ್ದಾರಿಯುತ ಪ್ರಜೆಗಳಾಗಿ ಸಧೃಢ ಬಾರತ ನಿರ್ಮಿಸಲು ದೇಶದ ಸಂಪನ್ಮೂಲಗಳಾಗಿ ದೇಶಕ್ಕೆ ಕೊಡುಗೆಯಾಗಿ ತಮ್ಮ ಆರೋಗ್ಯವನ್ನು ವೃದ್ಧಿಸಿಕೊಳ್ಳಬೇಕೆಂದರು.

ರಾಷ್ಟ್ರೀಯ ಯುವ ದಿನಾಚರಣೆ ನಿಮಿತ್ತ ಹೆಚ್.ಐ.ವಿ. ಏಡ್ಸ್ ಕುರಿತು ಭಿತ್ತಿಚಿತ್ರ ಸ್ಪರ್ಧೆಯಲ್ಲಿ ವಿಜೇತರಾದ ಜಿಮ್ಸ್ ನರ್ಸಿಂಗ್ ಕಾಲೇಜಿನ ಸುದೀಪರೆಡ್ಡಿ ಹುಲ್ಲೂರ (ಪ್ರಥಮ ಸ್ಥಾನ), ಮಹಮದ್ ಸೋಹೆಲ್ (ದ್ವಿತೀಯ ಸ್ಥಾನ) ಹಾಗೂ ಅಶ್ವಿನಿ ಮತ್ತು ಯಲ್ಲಮ್ಮ (ತೃತೀಯ ಸ್ಥಾನ) ಇವರುಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು. ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಡಾ. ಜ್ಯೋತಿ ಕರಿಗೌಡರ ಅಧ್ಯಕ್ಷೀಯ ನುಡಿಗಳನ್ನಾಡಿ, ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಯೌವನವನ್ನು ಜೋಪಾನ ಮಾಡಿಕೊಳ್ಳಬೇಕೆಂದು ಹೇಳಿದರು.

ಸಮಾರಂಭದಲ್ಲಿ ಜಿಮ್ಸ್ ನರ್ಸಿಂಗ್ ಕಾಲೇಜಿನ ಪ್ರಾಧ್ಯಾಪಕರಾದ ಪ್ರೊ. ಶಿವನಗೌಡರ್, ಪ್ರೊ. ಉಷಾ, ಪ್ರೊ. ಶಾರದಾ, ಪ್ರೊ. ಶಿವರಾಜ, ಪ್ರೊ. ಸಂಜಯ ಸೇರಿದಂತೆ ಪ್ರಾಧ್ಯಾಪಕ ವೃಂದದವರು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಲಕ್ಷ್ಮೀ ಜಾಧವ ಪಾರ್ಥಿಸಿದರು. ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಬಿ.ಬಿ. ಲಾಳಗಟ್ಟಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಣೆ ಮಾಡಿದರು. ಸಮುದಾಯ ವಿಭಾಗದ ಮುಖ್ಯಸ್ಥರಾದ ಪ್ರೊ. ಸ್ಟೇಫಿನ್ ವಂದಿಸಿದರು.



ಆರೋಗ್ಯ ಇಲಾಖೆಯ ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಬಿ.ಬಿ. ಲಾಳಗಟ್ಟಿ ರಾಷ್ಟ್ರೀಯ ಯುವ ದಿನಾಚರಣೆಯ ಮಹತ್ವವನ್ನು ತಿಳಿಸುತ್ತಾ, ಇಂದಿನ ಯುಗದಲ್ಲಿ ಯುವಕರು ಆರೋಗ್ಯ ಅರಿವವನ್ನು ಮೂಡಿಸಿ, ಶಿಕ್ಷಣವನ್ನು ಪರಿವರ್ತಿಸುವುದು ಎನ್ನುವ ಘೋಷ ವಾಕ್ಯದೊಂದಿಗೆ ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸಲು ಶಿಕ್ಷಣವನ್ನು ಹೆಚ್ಚು ಪ್ರಸ್ತುತ, ನ್ಯಾಯ ಸಮ್ಮತವಾಗಿಸುವ ನಿಟ್ಟಿನಲ್ಲಿ ಯುವಜನರ ಪಾತ್ರ ಮುಖ್ಯವಾಗಿದೆ. ಜಾತಿ, ಧರ್ಮ, ಲಿಂಗ, ಗುಂಪು ಆಧಾರಿತ ಸವಾಲುಗಳನ್ನು ಎದುರಿಸಿ ಯುವಕರು ಸನ್ನಡತೆಯನ್ನು ಅಳವಡಿಸಿಕೊಳ್ಳಬೆಂದು ತಿಳಿಸಿದರು.




# ಧರ್ಮ ನಿಧಿ ಸಮರ್ಪಣೆ ನಾಳೆ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿಶ್ವ ಹಿಂದೂ ಪರಿಷತ್ ಲಕ್ಷ್ಮೇಶ್ವರ ಪ್ರಖಂಡದಿಂದ ಮಾ.16ರಂದು ಸಂಜೆ 6.30ಕ್ಕೆ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ಧರ್ಮ ನಿಧಿ ಸಮರ್ಪಣೆ ಹಾಗೂ ಮಹಾಕುಂಭಮೇಳ ದರ್ಶನಾರ್ಥಿ ಬಂಧುಗಳಿಗೆ ಗೌರವ ಸಮರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಕರೆವಾಡಿಮಠದ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀಗಳು ವಹಿಸುವರು. ಬಸವೇಶ ಮಹಾಂತಶೆಟ್ಟರ ಸಭೆಯ ಅಧ್ಯಕ್ಷತೆ ವಹಿಸುವರು. ಮುಖ್ಯ ವಕ್ತಾರರಾಗಿ ಧಾರ್ಮಿಕ ಪುಂಜ ವಿಶ್ವ ಹಿಂದೂ ಪರಿಷತ್‌ನ ಕ್ಷೇತ್ರೀಯ ಪ್ರಮುಖ ಬಸವರಾಜ ಜಿ, ಗದಗ ಜಿಲ್ಲಾ ವಿಶ್ವ ಹಿಂದೂ ಪರಿಷತ್‌ನ ಉಪಾಧ್ಯಕ್ಷೆ ರಾಣಿ ಚಂದಾವರಿ, ವಿಶ್ವ ಹಿಂದೂ ಪರಿಷದ ಪ್ರಖಂಡ ಪಾಲಕರು ಪ್ರೊ. ಯಶವಂತ ಕಾಂಬಳೇಕರ ಆಗಮಿಸಲಿದ್ದಾರೆ ಎಂದು ವಿಶ್ವ ಹಿಂದೂ ಪರಿಷತ್ ಪ್ರಖಂಡ ತಾಲೂಕಾಧ್ಯಕ್ಷ ಬಸವರಾಜ ಅರಳಿ ಹಾಗೂ ಪ್ರಧಾನ ಕಾರ್ಯದರ್ಶಿ ರವಿ ಲಿಂಗಶೆಟ್ಟಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಮೇವುಂಡಿ-582113**

ತಾಲ್ಲೂಕ:ಮುಂಡರಗಿ ಜಿಲ್ಲೆ:ಗದಗ

ಇ-ಮೇಲ್ :-mevundi.mun.gdg@gmail.com

ಸಂ.ಗ್ರಾ.ಪಂ.ಮೇ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ: 14-03-2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಮೇವುಂಡಿ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಬರದೂರ ಗ್ರಾಮದ ಬಡ್ಡಿಯವರ ಮನೆಯಿಂದ ಮಲ್ಲಪ್ಪ ಬಾರಕೇರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ. | 1,20,127 |

**ಷರಾ:-** ಖಾಲಿ ಟೆಂಡರ್ ಫಾರ್ಮ ಅನ್ನು 500 ರೂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು.

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : **14-03-2025 ರಿಂದ 19-03-2025** ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : **20-03-2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30** ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ : **21 -03-2025 ರ ಮಧ್ಯಾಹ್ನ 3.00** ಗಂಟೆ.

**ನಿಬಂಧನೆಗಳು :** ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಮೇವುಂಡಿ ದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಮೇವುಂಡಿ**

**ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತಿ ಮೇವುಂಡಿ**

ವಾ.ಸಾ.ಇ/ಗದಗ/695/ದೇಶಪಾಂಡೆಪಬ್ಲಿಸಿಟಿ/2024-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka